Volume : 9 | Issue : 149 | August : 8 : 2026 : Friday
ಸಂಪುಟ : 9 | ಸಂಚಿಕೆ : 149 | ಆಗಸ್ಟ್ : 28 : 2026 : ಶುಕ್ರವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI

PRGI NO: KARKAN/2018/78481





ಸತತ ಹಿಟ್ ಸಿನಿಮಾಗಳ ಮೂಲಕ ಮಿಂಚುತ್ತಿರುವ ಮಮಿತಾ ಬಿಜು; 'ಪ್ರೇಮಲು' ಬಳಿಕ ಆರನೇ 100 ಕೋಟಿ ಸಿನಿಮಾದತ್ತ ಯಶಸ್ಸಿನ ಓಟ ಮುಂದುವರೆಸಿದ್ದಾರೆ.

ಗ್ರಾಮೀಣ ಜಲ ಆಸ್ತಿಗಳ ನಿರ್ವಹಣೆಗೆ ಜಿಐಎಸ್ ಆಧಾರಿತ ಆಪ್: ಈಶ್ವರ ಖಂಡ್ರೆ | ಪುಟ 2

ರೈತರ ಸಾಲ ಮನ್ನಾ ಮಾಡಿ' | ಪುಟ 2

## ■ ಸುದ್ದಿ ಚುಟುಕು

### ಕಾನ್ಪುರದಲ್ಲಿ ತರಬೇತಿ ವಿಮಾನ ಪತನ: ಇಬ್ಬರು ಸಾವು

● ವಿಕ್ರಮ ವಾಹಿನಿ । ಕಾನ್ಪುರ (ಉ. ಪ್ರ)

ಉತ್ತರ ಪ್ರದೇಶದ ಕಾನ್ಪುರದ ಗಂಗಾ ಬ್ಯಾರೇಜ್ ಬಳಿ ತರಬೇತಿ ವಿಮಾನ ಪತನಗೊಂಡ ಪರಿಣಾಮ ಕರ್ನಾಟಕ ಮೂಲದ ತರಬೇತಿ ಪೈಲಟ್ ಅಭಿಷೇಕ್ ಪೂಜಾರಿ ಹಾಗೂ ಗುಜರಾತ್ ಮೂಲದ ತರಬೇತುದಾರ ಸಚಿನ್ ಭಾಟಿಯಾ ಮೃತಪಟ್ಟಿದ್ದಾರೆ.

ಕಾನ್ಪುರದ ನತ್ತಾ ಪುರ್ವಾ ಗ್ರಾಮದ ವ್ಯಾಪ್ತಿಯಲ್ಲಿ ಬುಧವಾರ ಬೆಳಗ್ಗೆ ಸುಮಾರು 11.30ಕ್ಕೆ ಅಪಘಾತ ಸಂಭವಿಸಿದೆ. ನಾಲ್ಕು ಆಸನಗಳಿದ್ದ ವಿಮಾನದಲ್ಲಿ ಇಬ್ಬರು ಸಿಬ್ಬಂದಿ ಹಾರಾಟ ನಡೆಸುತ್ತಿದ್ದರು. ಇಬ್ಬರೂ ಒಟ್ಟಾರೆ ಸುಮಾರು 3,000 ಗಂಟೆಗಳ ಹಾರಾಟದ ಅನುಭವ ಹೊಂದಿದ್ದರು ಎಂದು ಪೊಲೀಸ್ ಆಯುಕ್ತ ರಘುವೀರ್ ಲಾಲ್ ತಿಳಿಸಿದ್ದಾರೆ.

ವಿಮಾನ ಅಪಘಾತದ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸ್ ಆಯುಕ್ತ ರಘುವೀರ್ ಲಾಲ್, ಜಂಟಿ ಪೊಲೀಸ್ ಆಯುಕ್ತ ಸಂಕಲ್ಪ್ ಶರ್ಮಾ ಹಾಗೂ ಡಿಸಿಪಿ ಅತುಲ್ ಶ್ರೀವಾಸ್ತವ ಸೇರಿದಂತೆ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಅಪಘಾತದ ತೀವ್ರತೆಗೆ ವಿಮಾನದ ಅವಶೇಷಗಳು ಸ್ಥಳದಲ್ಲಿ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು.

ವಿಮಾನವು ಯಾವುದಾದರೂ ವಸ್ತುವಿಗೆ ಡಿಕ್ಕಿ ಹೊಡೆದ ಬಳಿಕ ನಿಯಂತ್ರಣ ಕಳೆದುಕೊಂಡು ಪತನಗೊಂಡಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಆದರೆ ಅಪಘಾತಕ್ಕೆ ನಿಖರ ಕಾರಣವೇನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಘಟನೆ ಕುರಿತು ತಾಂತ್ರಿಕ ತನಿಖೆ ಆರಂಭಿಸಲಾಗಿದ್ದು, ತನಿಖೆ ಪೂರ್ಣಗೊಂಡ ಬಳಿಕವಷ್ಟೇ ಕಾರಣ ತಿಳಿದುಬರಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಪಘಾತಕ್ಕೂ ಮುನ್ನ ಭಾರಿ ಸ್ಫೋಟದಂತಹ ಶಬ್ದ ಕೇಳಿಸಿತು ಎಂದು ಸ್ಥಳೀಯ ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಇದರಿಂದ ಕೆಲಕಾಲ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಸಾಕ್ಷ್ಯಗಳನ್ನು ಸಂಗ್ರಹಿಸುತ್ತಿದ್ದಾರೆ.

### ಗ್ರಾಮೀಣ ಕುಡಿಯುವ ನೀರಿಗೆ ರೂ 67 ಸಾವಿರ ಕೋಟಿ: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮೀಣ ಪ್ರದೇಶಗಳಿಗೆ ಮೇಲ್ಮೈ ನೀರಿನ ಮೂಲಗಳಿಂದ ಕುಡಿಯುವ ನೀರು ಪೂರೈಸಲು ರಾಜ್ಯದಲ್ಲಿ ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರು ಯೋಜನೆಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಜಲ ಆಸ್ತಿ ನಿರ್ವಹಣೆ ತಂತ್ರಾಂಶ ಹಾಗೂ ಮೊಬೈಲ್ ಆಪ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಏಕಗ್ರಾಮ ಕುಡಿಯುವ ನೀರಿನ ಯೋಜನೆಗೆ ರೂ 30 ಸಾವಿರ ಕೋಟಿ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ರೂ 37 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದರು.

ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಸಹಭಾಗಿತ್ವದಲ್ಲಿ ಎರಡೂ ಯೋಜನೆಗಳಿಗೆ ಒಟ್ಟು ರೂ 67 ಸಾವಿರ ಕೋಟಿ ಹೂಡಿಕೆ ಮಾಡಲಾಗುತ್ತಿದ್ದು, ಸುಮಾರು 29 ಸಾವಿರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಹಲವು ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿದ್ದು, ಗ್ರಾಮೀಣ ಜನರಿಗೆ ಶಾಶ್ವತವಾಗಿ ಶುದ್ಧ ಕುಡಿಯುವ ನೀರು ಒದಗಿಸುವುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಖಂಡ್ರೆ ಹೇಳಿದರು.

### 'ಟಾಕ್ಸಿಕ್' ವಿಮರ್ಶೆ: ಯೂಟ್ಯೂಬರ್‌ಗೆ ಲೀಗಲ್ ನೋಟಿಸ್


● ವಿಕ್ರಮ ವಾಹಿನಿ । ಬೆಂಗಳೂರು

ಯಶ್ ಅಭಿನಯದ 'ಟಾಕ್ಸಿಕ್: ಎ ಫೇರಿ ಟೇಲ್ ಫಾರ್ ಗ್ರೋನ್-ಅಪ್ಸ್' ಸಿನಿಮಾ ಬಿಡುಗಡೆಯಾದ ಬೆನ್ನಲ್ಲೇ ವಿವಾದವೊಂದು ಮುನ್ನೆಲೆಗೆ ಬಂದಿದೆ. ಚಿತ್ರದ ವಿಮರ್ಶೆ ಮಾಡಿದ್ದ ಯೂಟ್ಯೂಬರ್‌ಗೆ ಚಿತ್ರತಂಡದ ಪರವಾಗಿ ಲೀಗಲ್ ನೋಟಿಸ್ ಕಳುಹಿಸಲಾಗಿದೆ ಎಂದು ತಿಳಿದುಬಂದಿದೆ. ಯೂಟ್ಯೂಬರ್ ಸೂರಜ್‌ಕುಮಾರ್ ಅವರು ತಮ್ಮ 'ಎಕ್ಸ್' ಖಾತೆಯಲ್ಲಿ ನೋಟಿಸ್‌ನ ಸ್ಕ್ರೀನ್‌ಶಾಟ್ ಹಂಚಿಕೊಂಡಿದ್ದಾರೆ. 'ಕೆವಿಎನ್' ಹಾಗೂ 'ಮಾನ್‌ಸ್ಟರ್ ಮೈಂಡ್ ಕ್ರಿಯೇಷನ್ಸ್' ಪರವಾಗಿ ಬೆಂಗಳೂರು ಮೂಲದ ಐಪ್ಲೆಕ್ಸ್ ಸಾಫ್ಟ್‌ವೇರ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ನೋಟಿಸ್ ನೀಡಿದೆ ಎನ್ನಲಾಗಿದೆ. 2ನೇ ಪುಟಕ್ಕೆ...

# 101 ತಾಲೂಕುಗಳಲ್ಲಿ ಭೀಕರ ಬರ

**ಮುಂಗಾರು ಮಳೆಯ ಕೊರತೆಯಿಂದ ಕರ್ನಾಟಕದ 101 ತಾಲೂಕುಗಳು ಬರಪೀಡಿತ ಎಂದು ಘೋಷಿಸಲು ಅರ್ಹವಾಗಿವೆ. ಬರ ನಿರ್ವಹಣೆಗೆ ರೂ 635 ಕೋಟಿ ಮೀಸಲಿಟ್ಟಿರುವ ರಾಜ್ಯ ಸರ್ಕಾರ, ಕೇಂದ್ರದಿಂದ ರೂ 1,239 ಕೋಟಿ ಎನ್‌ಡಿಆರ್‌ಎಫ್ ಪರಿಹಾರಕ್ಕಾಗಿ ಮನವಿ ಮಾಡಲು ಮುಂದಾಗಿದೆ. ಗುಳೆ ತಡೆಯಲು ಉದ್ಯೋಗ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ.**

● ವಿಕ್ರಮ ವಾಹಿನಿ । ಬೆಂಗಳೂರು



ರಾಜ್ಯದಲ್ಲಿ ಮುಂಗಾರು ಮಳೆಯ ಕೊರತೆಯಿಂದಾಗಿ 101 ತಾಲೂಕುಗಳು ಬರಪೀಡಿತ ಎಂದು ಘೋಷಿಸಲು ಅರ್ಹವಾಗಿವೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ. ಪರಮೇಶ್ವರ ತಿಳಿಸಿದ್ದಾರೆ.

ಬರ ಪರಿಸ್ಥಿತಿಯ ಕುರಿತು ಸರ್ಕಾರ ನಿರಂತರವಾಗಿ ಪರಿಶೀಲನೆ ನಡೆಸುತ್ತಿದ್ದು, ಕೇಂದ್ರದಿಂದ ಬರ ಪರಿಹಾರ ಪಡೆಯಲು ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ನಡೆಸಿದೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, 16ನೇ ಹಣಕಾಸು ಆಯೋಗದ ಶಿಫಾರಸಿನಂತೆ ರಾಜ್ಯಕ್ಕೆ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (ಎನ್‌ಡಿಆರ್‌ಎಫ್) ಅಡಿ ಕೇಂದ್ರ ಸರ್ಕಾರ 1,239 ಕೋಟಿ ಬಿಡುಗಡೆ ಮಾಡಬೇಕಿದೆ. ಮೊದಲ ಕಂತಿನಲ್ಲಿ 450 ಕೋಟಿ ನೀಡುವ ನಿರೀಕ್ಷೆಯಲ್ಲಿದ್ದೇವೆ. ಈ ಕುರಿತು ಕೇಂದ್ರ ಸರ್ಕಾರವನ್ನು ಭೇಟಿಯಾಗಿ ಶೀಘ್ರ ಪರಿಹಾರ ಬಿಡುಗಡೆಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳ ಮೇಲೂ ಪರಿಣಾಮ ಬೀರಿದ್ದು, ಹಲವು ಭಾಗಗಳಲ್ಲಿ ಕುಡಿಯುವ ನೀರು ಮತ್ತು ಉದ್ಯೋಗದ ಸಮಸ್ಯೆ ಎದುರಾಗುವ ಸಾಧ್ಯತೆ ಇದೆ. ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುತ್ತಿದೆ. ಬರಪೀಡಿತ ತಾಲೂಕುಗಳನ್ನು ಗುರುತಿಸುವ ಪ್ರಕ್ರಿಯೆ ಮುಂದುವರಿದಿದ್ದು, ಅಗತ್ಯವಿರುವ ಕಡೆ ಅಧಿಕೃತವಾಗಿ ಬರ ಘೋಷಣೆ ಮಾಡಲಾಗುವುದು ಎಂದು ಪರಮೇಶ್ವರ ಹೇಳಿದರು.

ರಾಜ್ಯದಲ್ಲಿ ಜನರು ಉದ್ಯೋಗಕ್ಕಾಗಿ ಗುಳೆ ಹೋಗುತ್ತಿದ್ದಾರೆ ಎಂಬ ವರದಿಗಳ ಹಿನ್ನೆಲೆಯಲ್ಲಿ, ಗುಳೆ ತಡೆಯಲು ಸರ್ಕಾರ ವಿಶೇಷ ಕ್ರಮ ಕೈಗೊಳ್ಳಲಿದೆ. ಬಸ್ ಮತ್ತು ರೈಲು ನಿಲ್ದಾಣಗಳಲ್ಲಿ ಅಧಿಕಾರಿಗಳನ್ನು ನಿಯೋಜಿಸಿ, ಹೊರ ರಾಜ್ಯಗಳಿಗೆ ತೆರಳುವ ಜನರನ್ನು ಮನವೊಲಿಸಲಾಗುವುದು. ಗ್ರಾಮೀಣ ಭಾಗದಲ್ಲೇ ಉದ್ಯೋಗ ಕಲ್ಪಿಸಲು ವಿಬಿಜಿ ರಾಮ್ ಜಿ ಯೋಜನೆಯಡಿ ಹೆಚ್ಚಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಬರ ನಿರ್ವಹಣೆಗೆ ಸರ್ಕಾರ ಈಗಾಗಲೇ 635 ಕೋಟಿ ಮೀಸಲಿಟ್ಟಿದ್ದು, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಗ್ರಾಮೀಣ ಉದ್ಯೋಗಕ್ಕೆ ಆದ್ಯತೆ ನೀಡಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕುಡಿಯುವ ನೀರಿನ ಉದ್ದೇಶಕ್ಕಾಗಿ 1 ಕೋಟಿ ಅನುದಾನ ನೀಡಲಾಗಿದೆ. ನೀರಿನ ಲಭ್ಯತೆ ಇರುವ ಪ್ರದೇಶಗಳಲ್ಲಿ ರೈತರಿಗೆ ಮೇವು ಬೆಳೆಗಳ ಬೀಜ ಪೂರೈಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕೇಂದ್ರದಿಂದ ಬರ ಪರಿಹಾರ ಶೀಘ್ರವಾಗಿ ಬಿಡುಗಡೆಯಾಗುವ ಅಗತ್ಯವಿದೆ. ಜನರು ಹಾಗೂ ಜಾನುವಾರುಗಳ ಹಿತದೃಷ್ಟಿಯಿಂದ ಸರ್ಕಾರ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಪರಮೇಶ್ವರ ಭರವಸೆ ನೀಡಿದರು.



ಪ್ರಧಾನಿ ನರೇಂದ್ರ ಮೋದಿ ಅವರನ್ನು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಗುರುವಾರ ಭೇಟಿ ಮಾಡಿ, ಕರ್ನಾಟಕದ ಅಭಿವೃದ್ಧಿ ಹಾಗೂ ಎನ್‌ಡಿಎ ಮೈತ್ರಿ ಬಲವರ್ಧನೆ ಕುರಿತು ಚರ್ಚಿಸಿ ಮಾರ್ಗದರ್ಶನ ಪಡೆದರು.

## ಸೈನಿಕರಿಗೆ ಬೆಳಗಾವಿ ಮಕ್ಕಳಿಂದ 3 ಸಾವಿರ ರಾಖಿ

● ವಿಕ್ರಮ ವಾಹಿನಿ । ಬೆಳಗಾವಿ

ಗಡಿಯಲ್ಲಿ ದೇಶದ ರಕ್ಷಣೆಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ಭಾರತೀಯ ಸೈನಿಕರಿಗೆ ಬೆಳಗಾವಿಯ ಜೈನ್ ಹೆರಿಟೇಜ್ ಶಾಲೆಯ ವಿದ್ಯಾರ್ಥಿಗಳು ಪ್ರೀತಿಯ ಸಂಕೇತವಾಗಿ 3 ಸಾವಿರ ಪರಿಸರಸ್ನೇಹಿ ರಾಖಿಗಳನ್ನು ತಯಾರಿಸಿ ಅಂಚೆ ಮೂಲಕ ರವಾನಿಸಿದ್ದಾರೆ.

ರಕ್ಷಾ ಬಂಧನದ ಹಿನ್ನೆಲೆಯಲ್ಲಿ ಕಳೆದ ಏಳು ವರ್ಷಗಳಿಂದ ಶಾಲೆಯ ವಿದ್ಯಾರ್ಥಿಗಳು ಸೈನಿಕರಿಗೆ ರಾಖಿ ಕಳುಹಿಸುವ ಅಭಿಯಾನ ನಡೆಸಿಕೊಂಡು ಬರುತ್ತಿದ್ದಾರೆ. ಈ ಬಾರಿ ನರ್ಸರಿಯಿಂದ 10ನೇ ತರಗತಿವರೆಗಿನ ಸುಮಾರು 1,000 ವಿದ್ಯಾರ್ಥಿಗಳು ಅಭಿಯಾನದಲ್ಲಿ ಭಾಗವಹಿಸಿದ್ದು, ತರಗತಿಯ ಬಿಡುವಿನ ವೇಳೆಯಲ್ಲಿ ಹಾಗೂ ಮನೆಯಲ್ಲಿ ರಾಖಿಗಳನ್ನು ತಯಾರಿಸಿದ್ದಾರೆ. ಶಿಕ್ಷಕರು ಮತ್ತು ಪೋಷಕರು ಕೂಡ ಮಕ್ಕಳಿಗೆ ಸಹಕಾರ ನೀಡಿದ್ದಾರೆ.

ಅಕ್ಕಿ, ಗೋಧಿ, ಉತ್ತತ್ತಿ, ಗೋಡಂಬಿ, ಏಲಕ್ಕಿ, ಶೇಂಗಾ, ಒಣದ್ರಾಕ್ಷಿ, ಲವಂಗ, ದಾಲ್ಚಿನ್ನಿ ಸೇರಿದಂತೆ ಮನೆಯಲ್ಲೇ ದೊರೆಯುವ ವಸ್ತುಗಳು ಹಾಗೂ ಬಣ್ಣದ ದಾರ ಬಳಸಿ ಮಕ್ಕಳು ಆಕರ್ಷಕ ರಾಖಿಗಳನ್ನು ಸಿದ್ಧಪಡಿಸಿದ್ದಾರೆ. ಪರಿಸರ ಸ್ನೇಹಿ ರಾಖಿಗಳನ್ನು ಬೆಂಗಳೂರು ಪ್ಯಾರಾ ರೆಜಿಮೆಂಟ್, ಮಧ್ಯಪ್ರದೇಶದ ಡೋಂಗ್ರಾ ರೆಜಿಮೆಂಟ್, ಕಾರವಾರದ ಕದಂಬ ನೌಕಾನೆಲೆ, ತಮಿಳುನಾಡಿನ ಮದ್ರಾಸ್ ರೆಜಿಮೆಂಟ್ ಸೇರಿದಂತೆ ದೇಶದ ವಿವಿಧ ಸೇನಾ ಘಟಕಗಳಿಗೆ ಅಂಚೆ ಮೂಲಕ ಕಳುಹಿಸಲಾಗಿದೆ.

ರಾಖಿಗಳ ಜತೆಗೆ ಮಕ್ಕಳು ಸೈನಿಕರಿಗೆ ಭಾವನಾತ್ಮಕ ಪತ್ರಗಳನ್ನೂ ಬರೆದಿದ್ದಾರೆ. 'ನೀವು ಗಡಿಯಲ್ಲಿ ಧೈರ್ಯದಿಂದ ಹೋರಾಡುತ್ತಿರುವುದರಿಂದ ನಾವು ನೆಮ್ಮದಿಯಿಂದ ಬದುಕುತ್ತಿದ್ದೇವೆ. ನಮ್ಮ ಪಾಲಿನ ನಿಜವಾದ ಹೀರೋಗಳು ನೀವೇ' ಎಂದು ಕೃತಜ್ಞತೆ ವ್ಯಕ್ತಪಡಿಸಿದ್ದಾರೆ.

ಕಳೆದ ವರ್ಷ ಶಾಲಾ ವಿದ್ಯಾರ್ಥಿಗಳು 7 ಸಾವಿರ ರಾಖಿಗಳನ್ನು ಸೈನಿಕರಿಗೆ ಕಳುಹಿಸಿದ್ದರು. ಅಲ್ಲದೆ ಜೈಸಲ್ಮೇರ್-ಜೋಧಪುರ ಗಡಿಗೆ ತೆರಳಿ ಯೋಧರಿಗೆ ನೇರವಾಗಿ ರಾಖಿ ಕಟ್ಟಿದ್ದರು.

'ರಾಖಿ ಕೇವಲ ಸಹೋದರರಿಗೆ ಕಟ್ಟುವ ಹಬ್ಬವಲ್ಲ. ದೇಶದ ರಕ್ಷಣೆಯ ಹೊಣೆ ಹೊತ್ತಿರುವ ವೀರಯೋಧರಿಗೂ ರಾಖಿ ಕಟ್ಟಬೇಕು ಎಂಬ ಧ್ಯೇಯದಿಂದ ಏಳು ವರ್ಷಗಳಿಂದ ಈ ಅಭಿಯಾನ ನಡೆಸುತ್ತಿದ್ದೇವೆ' ಎಂದು ಸ್ಕೌಟ್ಸ್ ಅಂಡ್ ಗೈಡ್ಸ್ ಶಿಕ್ಷಕಿ ಪಲ್ಲವಿ ನಾಡಕರ್ಣಿ ತಿಳಿಸಿದರು. ವಿದ್ಯಾರ್ಥಿಗಳು ಸೈನಿಕರ ಧೈರ್ಯ, ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸಿ, 'ನಮ್ಮ ಯೋಧರು ನಮ್ಮ ಹೆಮ್ಮೆ' ಎಂದು ಅಭಿಮಾನ ವ್ಯಕ್ತಪಡಿಸಿದ್ದಾರೆ. ಈ ಮೂಲಕ ರಕ್ಷಾ ಬಂಧನದ ಸಂದೇಶವನ್ನು ದೇಶದ ಗಡಿಯನ್ನು ಕಾಯುವ ವೀರಯೋಧರಿಗೂ ತಲುಪಿಸುವ ಪ್ರಯತ್ನ ಮಾಡಿದ್ದಾರೆ.

## ನೇಪಾಳ ಪ್ರವಾಹ: 290 ಭಾರತೀಯರು ನಾಪತ್ತೆ



● ವಿಕ್ರಮ ವಾಹಿನಿ । ನವದೆಹಲಿ

ನೇಪಾಳದಲ್ಲಿ ಸಂಭವಿಸಿದ ಭೀಕರ ಹಠಾತ್ ಪ್ರವಾಹ ಹಾಗೂ ಭೂಕುಸಿತದಿಂದ ಪರಿಸ್ಥಿತಿ ಮತ್ತಷ್ಟು ಗಂಭೀರವಾಗಿದ್ದು, ಮೃತರ ಸಂಖ್ಯೆ 389ಕ್ಕೆ ಏರಿಕೆಯಾಗಿದೆ. 1,300ಕ್ಕೂ ಹೆಚ್ಚು ಮಂದಿ ನಾಪತ್ತೆಯಾಗಿರುವ ಶಂಕೆ ವ್ಯಕ್ತವಾಗಿದ್ದು, ಅವರಲ್ಲಿ 290ಕ್ಕೂ ಹೆಚ್ಚು ಭಾರತೀಯರು ಸೇರಿದ್ದಾರೆ ಎಂದು ವರದಿಯಾಗಿದೆ. ಹಲವೆಡೆ ಸಂಪರ್ಕ ವ್ಯವಸ್ಥೆ ಕಡಿತಗೊಂಡಿರುವುದರಿಂದ ನಾಪತ್ತೆಯಾದವರ ನಿಖರ ಮಾಹಿತಿ ಸಂಗ್ರಹಿಸುವುದು ರಕ್ಷಣಾ ತಂಡಗಳಿಗೆ ಸವಾಲಾಗಿ ಪರಿಣಮಿಸಿದೆ.

ಪ್ರವಾಹದಿಂದ ನೇಪಾಳದ ಹಲವು ಜಿಲ್ಲೆಗಳಲ್ಲಿ ಭಾರಿ ಹಾನಿಯಾಗಿದ್ದು, ರಸ್ತೆಗಳು, ಸೇತುವೆಗಳು ಹಾಗೂ ಜಲವಿದ್ಯುತ್ ಯೋಜನೆಗಳು ಹಾನಿಗೊಳಗಾಗಿವೆ. ಸಂಕಷ್ಟಕ್ಕೆ ಸಿಲುಕಿರುವ ವಿದೇಶಿಗರು, ಪ್ರವಾಸಿಗರು ಹಾಗೂ ಯಾತ್ರಿಕರ ರಕ್ಷಣೆಗೆ ನೇಪಾಳದ ಭದ್ರತಾ ಪಡೆಗಳು ಮತ್ತು ವಿಪತ್ತು ನಿರ್ವಹಣಾ ತಂಡಗಳು ಕಾರ್ಯಾಚರಣೆ ತೀವ್ರಗೊಳಿಸಿವೆ. ಈಗಾಗಲೇ 1,300ಕ್ಕೂ ಹೆಚ್ಚು ಮಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ ಎಂದು ವರದಿಯಾಗಿದೆ.

ಕೈಲಾಸ-ಮಾನಸ ಸರೋವರ ಯಾತ್ರೆ ಸೇರಿದಂತೆ ವಿವಿಧ ಉದ್ದೇಶಗಳಿಗೆ ನೇಪಾಳಕ್ಕೆ ತೆರಳಿದ್ದ ಭಾರತೀಯರ ಪತ್ತೆ ಹಾಗೂ ರಕ್ಷಣೆಗೆ ಭಾರತೀಯ ರಾಯಭಾರ ಕಚೇರಿ ರಾಜ್ಯ ಸರ್ಕಾರಗಳೊಂದಿಗೆ ಸಮನ್ವಯ ಸಾಧಿಸಿದೆ. ತಮಿಳುನಾಡು, ಪಶ್ಚಿಮ ಬಂಗಾಳ, ಕೇರಳ, ರಾಜಸ್ಥಾನ, ಉತ್ತರ ಪ್ರದೇಶ ಹಾಗೂ ಮಹಾರಾಷ್ಟ್ರ ಸೇರಿದಂತೆ ಹಲವು ರಾಜ್ಯಗಳ ಪ್ರವಾಸಿಗರು ಸಂಕಷ್ಟಕ್ಕೆ ಸಿಲುಕಿರುವ ಮಾಹಿತಿ ಲಭ್ಯವಾಗಿದೆ.

ತಮಿಳುನಾಡಿನ 57 ಪ್ರವಾಸಿಗರ ಪೈಕಿ 37 ಮಂದಿಯ ಸಂಪರ್ಕ ಇನ್ನೂ ಪತ್ತೆಯಾಗಿಲ್ಲ. ಮತ್ತೊಂದೆಡೆ, ಪಶ್ಚಿಮ ಬಂಗಾಳದಿಂದ ಕೈಲಾಸ-ಮಾನಸ ಸರೋವರ ಯಾತ್ರೆಗೆ ತೆರಳಿದ್ದ 32 ಸದಸ್ಯರ ತಂಡವೂ ಪ್ರವಾಹದ ಬಳಿಕ ಸಂಪರ್ಕಕ್ಕೆ ಸಿಗದಿರುವುದು ಆತಂಕಕ್ಕೆ ಕಾರಣವಾಗಿದೆ.

ಕೊಯಮತ್ತೂರಿನ ಈಶಾ ಫೌಂಡೇಶನ್‌ನ ವಲಸೆ ಕೇಂದ್ರದಲ್ಲಿದ್ದ 77 ಮಂದಿಯ ಬಗ್ಗೆಯೂ ಮಾಹಿತಿ ಲಭ್ಯವಾಗಿಲ್ಲ ಎಂದು ಸಂಸ್ಥೆ ತಿಳಿಸಿದೆ.

ಮಹಾರಾಷ್ಟ್ರದ ಏಳು ಪ್ರವಾಸಿಗರ ಪೈಕಿ ನಾಲ್ವರನ್ನು ಸುರಕ್ಷಿತವಾಗಿ ಸಂಪರ್ಕಿಸಲಾಗಿದ್ದು, ಉಳಿದ ಮೂವರ ಪತ್ತೆಗೆ ಕಾರ್ಯಾಚರಣೆ ಮುಂದುವರಿದಿದೆ. ಕೇರಳದ 36 ಮಂದಿಯ ತಂಡ ಸುರಕ್ಷಿತವಾಗಿದ್ದು, ಪ್ರವಾಹ ಪೀಡಿತ ಪ್ರದೇಶಗಳಿಂದ ದೂರದಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೇಪಾಳದಲ್ಲಿ ಸಿಲುಕಿರುವ ಭಾರತೀಯರು ಹಾಗೂ ಅವರ ಕುಟುಂಬಸ್ಥರಿಗೆ ನೆರವಾಗಲು ವಿವಿಧ ರಾಜ್ಯಗಳು ಸಹಾಯವಾಣಿ ಕೇಂದ್ರಗಳನ್ನು ತೆರೆದಿವೆ. ನಾಪತ್ತೆಯಾದವರ ಮಾಹಿತಿ, ಕೊನೆಯ ಸಂಪರ್ಕದ ಸ್ಥಳ ಹಾಗೂ ಪ್ರಯಾಣದ ವಿವರಗಳನ್ನು ಸಂಗ್ರಹಿಸಿ ರಕ್ಷಣಾ ಕಾರ್ಯಾಚರಣೆಗೆ ಬಳಸಲಾಗುತ್ತಿದೆ. ನೇಪಾಳದಲ್ಲಿರುವ ಭಾರತೀಯರ ಸುರಕ್ಷತೆ ಖಚಿತಪಡಿಸಿಕೊಳ್ಳಲು ಭಾರತೀಯ ರಾಯಭಾರ ಕಚೇರಿ ಹಾಗೂ ಕೇಂದ್ರ ಸರ್ಕಾರ ನಿರಂತರವಾಗಿ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿವೆ.

ಪ್ರವಾಹದಿಂದಾಗಿ ಹಲವೆಡೆ ರಸ್ತೆ ಸಂಪರ್ಕ ಕಡಿತಗೊಂಡಿರುವ ಹಿನ್ನೆಲೆಯಲ್ಲಿ ರಕ್ಷಣಾ ಕಾರ್ಯಾಚರಣೆಯನ್ನು ತ್ವರಿತಗೊಳಿಸುವುದರ ಜತೆಗೆ, ಸಿಲುಕಿರುವ ಪ್ರವಾಸಿಗರನ್ನು ಸುರಕ್ಷಿತವಾಗಿ ಭಾರತಕ್ಕೆ ಕರೆತರಲು ಕ್ರಮ ಕೈಗೊಳ್ಳಲಾಗುತ್ತಿದೆ. ಮೃತಪಟ್ಟವರು ಹಾಗೂ ನಾಪತ್ತೆಯಾದವರ ಸಂಖ್ಯೆಯಲ್ಲಿ ಇನ್ನಷ್ಟು ಬದಲಾವಣೆಯಾಗುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ನೇಮಕಾತಿ ಅಕ್ರಮ: ಅರ್ಜಿದಾರರಿಗೆ ಮಾತ್ರ ಕೋರ್ಟ್ ರಕ್ಷಣೆ

● ವಿಕ್ರಮ ವಾಹಿನಿ । ಬೆಂಗಳೂರು

ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣದಲ್ಲಿ ಎಫ್‌ಐಆರ್ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಮಾತ್ರ ಮಧ್ಯಂತರ ತಡೆಯಾಜ್ಞೆಯ ರಕ್ಷಣೆ ಅನ್ವಯವಾಗಲಿದೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಅಕ್ರಮ ನೇಮಕಾತಿಗೆ ಸಂಬಂಧಿಸಿದಂತೆ ತನಿಖೆಗೆ ಸಹಕರಿಸುತ್ತಿರುವ ಅಭ್ಯರ್ಥಿಗಳ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದು ಎಂದು ಈ ಹಿಂದೆ ನೀಡಿದ್ದ ಮಧ್ಯಂತರ ಆದೇಶವು ನ್ಯಾಯಾಲಯದ ಮೆಟ್ಟಿಲೇರಿರುವ ಅಭ್ಯರ್ಥಿಗಳಿಗೆ ಮಾತ್ರ ಸೀಮಿತವಾಗಿದೆ ಎಂದು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠ ತಿಳಿಸಿದೆ.

ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸುವಂತೆ ಅಂತಿಮ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಕೆ.ಆರ್. ಲೋಕೇಶ್, ಬಿ.ಎಸ್. ಕಿರಣ್ ಗೌಡ ಸೇರಿದಂತೆ ಎಂಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ. ಇದೇ ವೇಳೆ ಪಶುವೈದ್ಯಾಧಿಕಾರಿ ನೇಮಕಾತಿ ಅಕ್ರಮ ಹಾಗೂ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಗೆ ಅಕ್ರಮ ನೇಮಕಾತಿ ಪ್ರಕರಣಗಳನ್ನು ಸಿಬಿಐ ತನಿಖೆಗೆ ವಹಿಸುವಂತೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ಹಾಸನದ ವೈದ್ಯ ಮಂಜುನಾಥ್ ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸಿದ್ದಾರೆ. ಎಲ್ಲ ಅರ್ಜಿಗಳನ್ನು ಪೀಠ ಒಟ್ಟಾಗಿ ವಿಚಾರಣೆ ನಡೆಸುತ್ತಿದೆ.



**ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣದಲ್ಲಿ ಹೈಕೋರ್ಟ್ ಮಹತ್ವದ ಸ್ಪಷ್ಟನೆ ನೀಡಿದ್ದು, ಎಫ್‌ಐಆರ್ ಪ್ರಶ್ನಿಸಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಮಾತ್ರ ಮಧ್ಯಂತರ ರಕ್ಷಣೆ ಅನ್ವಯಿಸುತ್ತದೆ ಎಂದು ತಿಳಿಸಿದೆ. ನೇಮಕಾತಿ ಅಕ್ರಮದ ಸಂಪೂರ್ಣ ತನಿಖೆಗೆ ಒತ್ತು ನೀಡಿರುವ ನ್ಯಾಯಪೀಠ, ಕಳಂಕಿತ-ಕಳಂಕರಹಿತ ಅಭ್ಯರ್ಥಿಗಳನ್ನು ಪ್ರತ್ಯೇಕಿಸುವ ಕುರಿತು ಈ ಹಂತದಲ್ಲಿ ಯಾವುದೇ ಆದೇಶ ನೀಡಲು ನಿರಾಕರಿಸಿದೆ.**

ಸರ್ಕಾರದ ಪರ ವಕೀಲರು, ಮಧ್ಯಂತರ ರಕ್ಷಣೆಯು ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಮಾತ್ರ ಸೀಮಿತವಾಗಬೇಕು ಎಂದು ಮನವಿ ಮಾಡಿದರು.

ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದು, ಎಫ್‌ಐಆರ್‌ನಲ್ಲಿ ಹೆಸರು ಇಲ್ಲದ ಅಭ್ಯರ್ಥಿಗಳ ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಂಡಿರುವುದನ್ನು ಅರ್ಜಿದಾರರ ಪರ ವಕೀಲರು ಪೀಠದ ಗಮನಕ್ಕೆ ತಂದರು. ಕಳಂಕಿತ ಮತ್ತು ಕಳಂಕರಹಿತ ಅಭ್ಯರ್ಥಿಗಳನ್ನು ಪ್ರತ್ಯೇಕಿಸಿ ನೇಮಕಾತಿಗೆ ಅವಕಾಶ ನೀಡಬೇಕು ಎಂದು ಮನವಿ ಮಾಡಿದರು. ಆದರೆ, ಈ ಹಂತದಲ್ಲಿ ಅಂತಹ ಆದೇಶ ನೀಡಲು ಸಾಧ್ಯವಿಲ್ಲ ಎಂದು ಪೀಠ ತಿಳಿಸಿ, ನೇಮಕಾತಿ ಆದೇಶ ಪತ್ರಗಳು ಸರ್ಕಾರದ ಬಳಿಯೇ ಇರಲಿ ಎಂದು ಸೂಚಿಸಿತು.

ಅಕ್ರಮ ನೇಮಕಾತಿಯನ್ನು ನಿರ್ಮೂಲನೆ ಮಾಡುವ ಉದ್ದೇಶ ನ್ಯಾಯಾಲಯಕ್ಕಿದ್ದು, ಅದಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪೀಠ ಅಭಿಪ್ರಾಯಪಟ್ಟಿತು.

ಇದೇ ವೇಳೆ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಯ ನೇಮಕಾತಿ ಪ್ರಕ್ರಿಯೆಯಲ್ಲೂ ಅಕ್ರಮ ನಡೆದಿರುವ ಆರೋಪ ಕೇಳಿಬಂದಿದ್ದು, ಕೆಪಿಎಸ್‌ಸಿಯಲ್ಲಿದ್ದ ಸಿಸಿಟಿವಿ ದೃಶ್ಯಗಳು ಹಾಗೂ ಹಾರ್ಡ್‌ಡಿಸ್ಕ್ ನಾಪತ್ತೆಯಾಗಿರುವುದನ್ನು ವಕೀಲರು ನ್ಯಾಯಾಲಯದ ಗಮನಕ್ಕೆ ತಂದರು. ವಾದ ಆಲಿಸಿದ ಪೀಠ ವಿಚಾರಣೆಯನ್ನು ಮುಂದೂಡಿತು.

### ಮಧು ಬಂಗಾರಪ್ಪ ಗೆದ್ದರೆ ಕಾವಿ ತ್ಯಜಿಸುವೆ: ಪ್ರಣವಾನಂದ ಸ್ವಾಮೀಜಿ

● ವಿಕ್ರಮ ವಾಹಿನಿ । ದಾವಣಗೆರೆ

ಸಚಿವ ಮಧು ಬಂಗಾರಪ್ಪ ವಿರುದ್ಧ ವಾಗ್ದಾಳಿ ಮುಂದುವರಿಸಿರುವ ಪ್ರಣವಾನಂದ ಸ್ವಾಮೀಜಿ, ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಸೊರಬ ಕ್ಷೇತ್ರದಿಂದ ಮಧು ಬಂಗಾರಪ್ಪ ಮತ್ತೆ ಶಾಸಕರಾಗಿ ಆಯ್ಕೆಯಾದರೆ ಕಾವಿ ಬಟ್ಟೆ ತ್ಯಜಿಸುವುದಾಗಿ ಸವಾಲು ಹಾಕಿದ್ದಾರೆ. ಅಲ್ಲದೆ, ತಾವೇ ಸೊರಬ ಕ್ಷೇತ್ರದಿಂದ ಮಧು ಬಂಗಾರಪ್ಪ ವಿರುದ್ಧ ಸ್ಪರ್ಧಿಸುವುದಾಗಿ ಘೋಷಿಸಿದ್ದಾರೆ.

ಶ್ರೀ ನಾರಾಯಣ ಗುರು ಜಯಂತಿ ಸರ್ಕಾರಿ ಕಾರ್ಯಕ್ರಮದ ಆಹ್ವಾನ ಪತ್ರಿಕೆಯಿಂದ ತಮ್ಮ ಹೆಸರು ತೆಗೆದುಹಾಕಿರುವುದೇ ವಿವಾದಕ್ಕೆ ಕಾರಣ ಎಂದು ಆರೋಪಿಸಿದ ಸ್ವಾಮೀಜಿ, ಮೊದಲ ಆಹ್ವಾನ ಪತ್ರಿಕೆಯಲ್ಲಿ ತಮ್ಮ ಹೆಸರು ಇತ್ತು. ಬಳಿಕ ಮಧು ಬಂಗಾರಪ್ಪ ಅವರು ಮುಖ್ಯಮಂತ್ರಿ ಮೇಲೆ ಒತ್ತಡ ಹೇರಿ ತಮ್ಮ ಹೆಸರನ್ನು ತೆಗೆಸಿದ್ದಾರೆ ಎಂದು ದೂರಿದರು.

ಮಧು ಬಂಗಾರಪ್ಪ ಅವರನ್ನು ಸಚಿವ ಸಂಪುಟದಿಂದ ಕೈಬಿಡಬೇಕು ಎಂದು ಆಗ್ರಹಿಸಿದ ಅವರು, ತಮ್ಮ ವಿರುದ್ಧ ಕಾಂಗ್ರೆಸ್ ಹೈಕಮಾಂಡ್‌ಗೆ ತಪ್ಪು ಮಾಹಿತಿ ನೀಡಲಾಗಿದೆ ಎಂದು ಆರೋಪಿಸಿದರು. 2ನೇ ಪುಟಕ್ಕೆ...

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಸೂರ್ಯ ನಿಮ್ಮನ್ನು ಎಬ್ಬಿಸುವ ತನಕ ನೀವು ಮಲಗಿಕೊಂಡರೆ ನೀವು ಅಪಯಶಸ್ವಿಯಾಗುತ್ತೀರಿ. ನೀವು ಯಾವತ್ತಿನಿಂದ ಸೂರ್ಯನನ್ನು ಎಬ್ಬಿಸುತ್ತಿರೋ ಅವತ್ತಿನಿಂದ ನೀವು ಯಶಸ್ಸಿನೆಡೆಗೆ ಸಾಗುತ್ತೀರಿ.

### ದಿನ ಪಂಚಾಂಗ

ಆಗಸ್ಟ್, 28–2026, ಶುಕ್ರವಾರ ವರ್ಷ ಋತು, ಶ್ರಾವಣ ಮಾಸ, ಶುದ್ಧ ಪಕ್ಷ. ಪೂರ್ಣಿಮಾ ತಿಥಿ ಬೆ–9:12
ಶತಭಿಷ ನಕ್ಷತ್ರ ರಾ–4:03
ರಾಹುಕಾಲ ಬೆ–10:47–12:20
ರಕ್ಷಾಬಂಧನ, ನೂಲ ಹುಣ್ಣಿಮೆ, ವೈಖಾನಸ ಜಯಂತಿ, ಸಂಸ್ಕೃತ ದಿನ, ಕುಮಾರಬೆಟ್ಟ ರಥ, ಹುಬ್ಬಳ್ಳಿ ಸಿದ್ಧಾರೂಢಸ್ವಾಮಿ ಪುಣ್ಯದಿನ, ಬಾಣಂದೂರ ಯೋಗಾಶ್ರಮ ಉಪಾಕರ್ಮ, ಶಿವಯೋಗ ಮಂದಿರ ಕುಮಾರಸ್ವಾಮಿ ರಥ, ಯಲಬುರ್ಗಾ । ಬಿನ್ನಾಳ ಬಸವೇಶ್ವರ ಜಾತ್ರೆ, ಹೂಲಿ ನೀಲಕಂಠಸ್ವಾಮಿ ಪುಣ್ಯದಿನ, ಗೊಡಚಿ ವೀರಭದ್ರೇಶ್ವರ ನುಲೋತ್ಸವ

### ಆರೋಗ್ಯ

## ಮಳೆಗಾಲದಲ್ಲಿ ಮಜ್ಜಿಗೆ ಕುಡಿಯುವುದು ಒಳ್ಳೆಯದೇ?

ಮಳೆಗಾಲದಲ್ಲಿ ಹವಾಮಾನ ಬದಲಾವಣೆ, ತೇವಾಂಶ ಹಾಗೂ ಆಹಾರ ಪದ್ಧತಿಯಲ್ಲಿನ ವ್ಯತ್ಯಾಸದಿಂದ ಜೀರ್ಣಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳು ಕೆಲವರನ್ನು ಕಾಡುವುದು ಸಾಮಾನ್ಯ. ಗ್ಯಾಸ್, ಹೊಟ್ಟೆ ಉಬ್ಬರ, ಅಜೀರ್ಣದಂತಹ ಸಮಸ್ಯೆಗಳಿಂದ ಬಳಲುವವರು ಆಹಾರದಲ್ಲಿ ಕೆಲವು ಬದಲಾವಣೆಗಳನ್ನು ಮಾಡಿಕೊಳ್ಳುತ್ತಾರೆ. ಈ ಸಂದರ್ಭದಲ್ಲಿ ಸುಲಭವಾಗಿ ದೊರೆಯುವ ಮತ್ತು ಬಹುತೇಕ ಮನೆಗಳಲ್ಲಿ ಸೇವಿಸುವ ಪಾನೀಯವೆಂದರೆ ಮಜ್ಜಿಗೆ.

ತಾಜಾ ಮಜ್ಜಿಗೆಯನ್ನು ಸಮತೋಲಿತ ಆಹಾರದ ಭಾಗವಾಗಿ ಸೇವಿಸುವುದರಿಂದ ದೇಹಕ್ಕೆ ದ್ರವಾಂಶ ಹಾಗೂ ಕೆಲವು ಪೋಷಕಾಂಶಗಳು ದೊರೆಯುತ್ತವೆ. ಮಜ್ಜಿಗೆಯಲ್ಲಿ ನೀರು, ಪ್ರೋಟೀನ್, ಕ್ಯಾಲ್ಸಿಯಂ ಸೇರಿದಂತೆ ಹಲವು ಪೋಷಕಾಂಶಗಳಿದ್ದು, ಹುದುಗಿಸಿದ ಮಜ್ಜಿಗೆಯಲ್ಲಿ ಪ್ರೋಬಯೋಟಿಕ್ ಬ್ಯಾಕ್ಟೀರಿಯಾಗಳು ಇರಬಹುದಾಗಿದೆ. ಇವು ಕರುಳಿನ ಆರೋಗ್ಯಕ್ಕೆ ಪೂರಕವಾಗಬಹುದು. ಆದರೆ ಮಜ್ಜಿಗೆಯನ್ನು ಯಾವುದೇ ಕಾಯಿಲೆಗೆ ಔಷಧಿ ಅಥವಾ ಸೋಂಕು ತಡೆಯುವ ಪಾನೀಯ ಎಂದು ಪರಿಗಣಿಸಬಾರದು.



ಸರಿಯಾದ ರೀತಿಯಲ್ಲಿ ತಯಾರಿಸಿದ ಮಜ್ಜಿಗೆ ಕೆಲವರಿಗೆ ಜೀರ್ಣಕ್ರಿಯೆ ಸುಗಮವಾಗಲು ಸಹಾಯ ಮಾಡಬಹುದು. ಹುದುಗಿಸಿದ ಹಾಲಿನಿಂದ ತಯಾರಿಸುವ ಮಜ್ಜಿಗೆಯಲ್ಲಿರುವ ಪ್ರೋಬಯೋಟಿಕ್‌ಗಳು ಕರುಳಿನಲ್ಲಿರುವ ಉತ್ತಮ ಬ್ಯಾಕ್ಟೀರಿಯಾಗಳ ಸಮತೋಲನಕ್ಕೆ ಪೂರಕವಾಗಬಹುದು. ಇದರಿಂದ ಕೆಲವರಲ್ಲಿ ಜೀರ್ಣಕ್ರಿಯೆಗೆ ಸಂಬಂಧಿಸಿದ ಅಸ್ವಸ್ಥತೆ ಕಡಿಮೆಯಾಗುವ ಸಾಧ್ಯತೆಯಿದೆ.

ಆದರೆ ಗ್ಯಾಸ್, ಆಸಿಡಿಟಿ ಅಥವಾ ಹೊಟ್ಟೆಯ ಸಮಸ್ಯೆ ಇರುವ ಪ್ರತಿಯೊಬ್ಬರಿಗೂ ಮಜ್ಜಿಗೆ ಒಂದೇ ರೀತಿಯಲ್ಲಿ ಪ್ರಯೋಜನ ನೀಡುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ಮಜ್ಜಿಗೆ ಸೇವಿಸಿದ ನಂತರ ಹೊಟ್ಟೆ ಉಬ್ಬರ, ಅಸ್ವಸ್ಥತೆ ಅಥವಾ ಇತರ ಸಮಸ್ಯೆಗಳು ಕಾಣಿಸಿಕೊಂಡರೆ ಅದರ ಸೇವನೆಯನ್ನು ಕಡಿಮೆ ಮಾಡುವುದು ಅಥವಾ ವೈದ್ಯರ ಸಲಹೆ ಪಡೆಯುವುದು ಸೂಕ್ತ.

ಮಜ್ಜಿಗೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರಿರುವುದರಿಂದ ದೇಹಕ್ಕೆ ದ್ರವಾಂಶ ಒದಗಿಸಲು ಸಹಾಯ ಮಾಡಬಹುದು. ದೈಹಿಕ ಚಟುವಟಿಕೆಯ ನಂತರ ಅಥವಾ ಬಿಸಿಲಿನ ದಿನಗಳಲ್ಲಿ ಇದು ಹಗುರವಾದ ಪಾನೀಯವಾಗಿರಬಹುದು. ಮಜ್ಜಿಗೆಯ ಮೂಲಕ ಕೆಲವು ಖನಿಜಾಂಶಗಳೂ ದೊರೆಯಬಹುದು.

ಆದರೆ ದಿನವಿಡೀ ನೀರಿನ ಬದಲಿಗೆ ಮಜ್ಜಿಗೆಯನ್ನೇ ಸೇವಿಸುವ ಅಗತ್ಯವಿಲ್ಲ. ದೇಹದ ದ್ರವಾಂಶ ಸಮತೋಲನ ಕಾಪಾಡಿಕೊಳ್ಳಲು ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯುವುದು ಅತ್ಯಂತ ಮುಖ್ಯ.

ಮಜ್ಜಿಗೆಯನ್ನು ಮಿತವಾಗಿ ಸೇವಿಸುವುದು ಉತ್ತಮ. ಒಂದು ದಿನಕ್ಕೆ ಎಷ್ಟು ಪ್ರಮಾಣ ಸೂಕ್ತ ಎಂಬುದು ವ್ಯಕ್ತಿಯ ವಯಸ್ಸು, ಆಹಾರ ಪದ್ಧತಿ, ದೈಹಿಕ ಚಟುವಟಿಕೆ ಹಾಗೂ ಆರೋಗ್ಯ ಸ್ಥಿತಿಯನ್ನು ಅವಲಂಬಿಸಿರುತ್ತದೆ. ಹೆಚ್ಚಿನ ಉಪ್ಪು, ಸಕ್ಕರೆ ಅಥವಾ ಮಸಾಲೆಗಳನ್ನು ಸೇರಿಸುವ ಬದಲು ಸರಳವಾದ ಮಜ್ಜಿಗೆ ಸೇವಿಸುವುದು ಉತ್ತಮ ಆಯ್ಕೆಯಾಗಬಹುದು.

## ಆರ್ಯ ವೈಶ್ಯ ನಿಗಮದ ಯೋಜನೆಗಳಿಗೆ ಅರ್ಜಿ ಆಹ್ವಾನ

● ವಿಕ್ರಮ ವಾಹಿನಿ । ಬೆಂಗಳೂರು


ವಿಕಾಸಸೌಧದಲ್ಲಿ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ 4 ಯೋಜನೆಗಳಿಗೆ 2026–27ನೇ ಸಾಲಿಗೆ ಅರ್ಜಿ ಆಹ್ವಾನಿಸುವ ಕರಪತ್ರಗಳನ್ನು ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಬಿಡುಗಡೆಗೊಳಿಸಿದರು.

ಆ ಬಳಿಕ ಮಾತನಾಡಿದ ಅವರು, ರಾಜ್ಯದಲ್ಲಿ ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದ ಆರ್ಯ ವೈಶ್ಯ ಸಮುದಾಯದವರಿಗೆ ಶಿಕ್ಷಣ, ಸ್ವಯಂ ಉದ್ಯೋಗ, ಕೃಷಿಗೆ ಮತ್ತು ಆಹಾರ ತಯಾರಿಕೆಗೆ ಸಂಬಂಧಪಟ್ಟ ಯೋಜನೆಗಳನ್ನು ರೂಪಿಸಿ, ಆರ್ಯ ವೈಶ್ಯ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿರುವುದಾಗಿ ತಿಳಿಸಿದರು.

ಕಳೆದ 7 ವರ್ಷಗಳಿಂದ ನಿಗಮಕ್ಕೆ ಬಿಡುಗಡೆಯಾದ ಅನುದಾನ ಹಾಗೂ ಮರುಪಾವತಿ ಮೊತ್ತ ಸೇರಿಸಿ ಒಟ್ಟು ಕೋಟಿಗಳಲ್ಲಿ 16,785 ಫಲಾನುಭವಿಗಳಿಗೆ ಸಾಲ – ಸಬ್ಸಿಡಿ ಮತ್ತು ಶುಲ್ಕ ಮರುಪಾವತಿ ನೀಡಿ ಶೇ.96ರಷ್ಟು ಪ್ರಗತಿ ಸಾಧಿಸಲಾಗಿರುತ್ತದೆ ಎಂದು ಮಾಹಿತಿ ನೀಡಿದರು.

ಮುಂದುವರೆದು, 11 ಕೋಟಿ ಸಾಲ ಮರುಪಾವತಿಯನ್ನು ಪಡೆಯುವಲ್ಲಿ ನಿಗಮವು ಯಶಸ್ವಿಯಾಗಿರುತ್ತದೆ ಹಾಗೂ 740 ಫಲಾನುಭವಿಗಳು ಪೂರ್ಣಪ್ರಮಾಣದಲ್ಲಿ ಸಾಲ ಮರುಪಾವತಿ ಮಾಡಿರುವುದು ಈ ನಿಗಮದ ವಿಶಿಷ್ಟ ಸಾಧನೆಯಾಗಿದೆ ಎಂದರು.

2026–27ನೇ ಸಾಲಿಗೆ ಎಲ್ಲಾ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅಕ್ಟೋಬರ್ 15ರಂದು



ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಆರ್ಯ ವೈಶ್ಯ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ಡಿಸಿಎಂ ಮನವಿ ಮಾಡಿದರು.

ನಿಗಮದ ವತಿಯಿಂದ ಜಾರಿಗೊಳಿಸಲಾಗುತ್ತಿರುವ ಯೋಜನೆಗಳ ಮೂಲಕ ಸಮುದಾಯದ ಅರ್ಹ ಫಲಾನುಭವಿಗಳಿಗೆ ಆರ್ಥಿಕ ನೆರವು, ಸಾಲ, ಸಬ್ಸಿಡಿ ಹಾಗೂ ಶುಲ್ಕ ಮರುಪಾವತಿ ಸೌಲಭ್ಯ ಕಲ್ಪಿಸಲಾಗುತ್ತಿದೆ. ವಿಶೇಷವಾಗಿ ಶಿಕ್ಷಣ ಮತ್ತು ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡುವ ಮೂಲಕ ಯುವಜನರು ಸ್ವಾವಲಂಬಿಗಳಾಗಲು ಅವಕಾಶ ಕಲ್ಪಿಸಲಾಗುತ್ತಿದೆ.

ಕೃಷಿ ಹಾಗೂ ಆಹಾರ ತಯಾರಿಕೆ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವ ಅರ್ಹ ಅಭ್ಯರ್ಥಿಗಳಿಗೂ ಯೋಜನೆಗಳಡಿ ನೆರವು ನೀಡಲಾಗುತ್ತಿದೆ. ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನಿಗಮದ ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಡಾ. ಜಿ. ಪರಮೇಶ್ವರ ಸೂಚಿಸಿದರು.

ಅರ್ಹರು ನಿಗಮದ ಯೋಜನೆಗಳ ಕುರಿತು ಅಗತ್ಯ ಮಾಹಿತಿಯನ್ನು ಪಡೆದುಕೊಂಡು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬೇಕು. ಅಕ್ಟೋಬರ್ 15ರ ಬಳಿಕ ಸಲ್ಲಿಕೆಯಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲವಾದ್ದರಿಂದ ಕೊನೆಯ ದಿನದವರೆಗೆ ಕಾಯದೆ ಶೀಘ್ರ ಅರ್ಜಿ ಸಲ್ಲಿಸುವಂತೆ ನಿಗಮ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ನಿಗಮದ ಅಧ್ಯಕ್ಷರಾದ ಕೆ.ವಿ.ರಾಮ್ ಪ್ರಸಾದ್, ಕಂದಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ, ನಿಗಮದ ವ್ಯವಸ್ಥಾಪಕ ನಿರ್ದೇಶಕಿಯಾದ ದೀಪಶ್ರೀ ಕೆ. ಉಪಸ್ಥಿತರಿದ್ದರು.

## ಮಧು ಬಂಗಾರಪ್ಪ ಗೆದ್ದರೆ ಕಾವಿ ತ್ಯಜಿಸುವೆ: ಪ್ರಣವಾನಂದ ಸ್ವಾಮೀಜಿ

1ನೇ ಪುಟದಿಂದ

ಈಡಿಗ ಸಮುದಾಯದ ಹೃದಯದಿಂದ ತಮ್ಮನ್ನು ಯಾರಿಂದಲೂ ದೂರ ಮಾಡಲು ಸಾಧ್ಯವಿಲ್ಲ ಎಂದರು.

ಅಧಿಕಾರದ ಅಮಲಿನಿಂದ ಮಧು ಬಂಗಾರಪ್ಪ ಈ ರೀತಿಯ ವರ್ತನೆ ತೋರುತ್ತಿದ್ದಾರೆ ಎಂದು ಟೀಕಿಸಿದ ಅವರು, ಮುಂದಿನ ಚುನಾವಣೆಯಲ್ಲಿ ಮಧು ಬಂಗಾರಪ್ಪ ಗೆಲ್ಲುವುದಿಲ್ಲ ಎಂದು ಭವಿಷ್ಯ ನುಡಿದರು. ನಾರಾಯಣ ಗುರು ಜಯಂತಿ ದಿನ ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಲಾಗುವುದು. ಮುಂದಿನ ದಿನಗಳಲ್ಲಿ ದೆಹಲಿಯ ಜಂತರ್‌ಮಂತರ್‌ನಲ್ಲೂ ಪ್ರತಿಭಟನೆ ನಡೆಸುವುದಾಗಿ ತಿಳಿಸಿದರು.

ಮಧು ಬಂಗಾರಪ್ಪ ಅವರ ಅನುಯಾಯಿಗಳು ತಮಗೆ ಕರೆ ಮಾಡಿ ಜೀವ ಬೆದರಿಕೆ ಹಾಕಿದ್ದಾರೆ ಎಂದು ಪ್ರಣವಾನಂದ ಸ್ವಾಮೀಜಿ ಆರೋಪಿಸಿದ್ದು, ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಧು ಬಂಗಾರಪ್ಪ ಅವರ ವಿರುದ್ಧ ತಮ್ಮ ಹೋರಾಟ ಮುಂದುವರಿಯಲಿದೆ ಎಂದು ಪ್ರಣವಾನಂದ ಸ್ವಾಮೀಜಿ ಹೇಳಿದರು. ಈಡಿಗ ಸಮುದಾಯದ ವಿಚಾರದಲ್ಲಿ ಅನ್ಯಾಯವಾಗುತ್ತಿದೆ ಎಂಬ ಭಾವನೆ ಸಮುದಾಯದ ಜನರಲ್ಲಿ ಮೂಡಿದ್ದು, ಅದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಶ್ರೀ ನಾರಾಯಣ ಗುರು ಅವರ ತತ್ವ, ಆದರ್ಶ ಹಾಗೂ ಸಮುದಾಯದ ಹಿತಾಸಕ್ತಿಗಾಗಿ ಧ್ವನಿ ಎತ್ತುವುದು ತಮ್ಮ ಕರ್ತವ್ಯವಾಗಿದೆ. ಯಾವುದೇ ರಾಜಕೀಯ ಒತ್ತಡಕ್ಕೂ ಮಣಿಯದೆ ಈ ವಿಚಾರದಲ್ಲಿ ಹೋರಾಟ ನಡೆಸುವುದಾಗಿ ಅವರು ತಿಳಿಸಿದರು.

## ದೃಢ ಸಂಕಲ್ಪದಿಂದ ದುರ್ಲಭವನ್ನೂ ಸಾಧಿಸಬಹುದು: ರಾಘವೇಶ್ವರ ಶ್ರೀ

● ವಿಕ್ರಮ ವಾಹಿನಿ । ಗೋಕರ್ಣ

ನಮ್ಮ ದೇಹಕ್ಕೆ ನಾವು ಪ್ರಭುಗಳಾಗಿದ್ದು, ಗಟ್ಟಿಯಾದ ಸಂಕಲ್ಪವನ್ನು ಮಾಡಿದಾಗ ದೇಹ ನಮ್ಮ ಅವಶ್ಯಕತೆಗೆ ತಕ್ಕಂತೆ ಬದಲಾಗುತ್ತದೆ. ಆಗ ನಾವು ದುರ್ಲಭವನ್ನೂ ಕೂಡ ಸಾಧಿಸಿಕೊಳ್ಳಬಹುದು.ಆದರೆ ಸಂಕಲ್ಪ ಧೃಢವಾಗಿರಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 27.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಅಗ್ನಿ ಹಾಗೂ ಪ್ರಾಣಾಯಾಮಗಳು ಆಹಾರಕ್ಕೆ ಪೂರಕ ವಿಚಾರಗಳಾಗಿದ್ದು, ಪೀಠಿಕೆಯಿಲ್ಲದೇ ಪಾಠವಿಲ್ಲ ಎಂಬಂತೆ ಅಗ್ನಿಯ ಅರಿವಿಲ್ಲದೇ ಆಹಾರವನ್ನು ತಿಳಿದುಕೊಳ್ಳಲಾಗದು. ಹಸಿವು ಗೊತ್ತಾಗದವನಿಗೆ



ಊಟದ ಸ್ವಾಧ ಗೊತ್ತಾಗದು. ಹಾಗೆಯೇ ಅಗ್ನಿಯನ್ನು ಸಮರ್ಪಕವಾಗಿ ತಿಳಿದುಕೊಳ್ಳದೇ ಇದ್ದರೆ ಆಹಾರದ ವಿಚಾರವನ್ನು ಸಂಪೂರ್ಣವಾಗಿ ತಿಳಿದುಕೊಂಡಂತಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ಆಹಾರದ ಪ್ರವಚನ ಸರಣಿಯಲ್ಲಿ ಅಗ್ನಿಯ ಕುರಿತಾದ ವಿಚಾರಗಳನ್ನು ಪ್ರಸ್ತಾಪಿಸಲಾಯಿತು ಎಂದು ಹೇಳಿದರು.

ಬಾವಿಯನ್ನು ತೋಡುವಾಗ ಎಲ್ಲಾ ಕಡೆ 5 – 10 ಅಡಿಗಳ ಗುಂಡಿಯನ್ನು ತೋಡಿದರೆ ನೀರು ಸಿಗುವುದಿಲ್ಲ. ಸರಿಯಾದ ಒಂದೇ ಜಾಗದಲ್ಲಿ ಆಳವಾದ ಗುಂಡಿಯನ್ನು ತೆಗೆದಾಗ ಬಾವಿಯಲ್ಲಿ ನೀರು ಸಿಗುತ್ತದೆ. ಆಧುನಿಕತೆಯ ಭರಾಟೆಯಲ್ಲಿ ನಾವು ಯಾವುದೇ ವಿಷಯದಲ್ಲಿ ಆಳಕ್ಕೆ ಇಳಿಯುತ್ತಿಲ್ಲ. ಹಲವಾರು ವಿಷಯಗಳನ್ನು ಕೇವಲ ಸ್ಪರ್ಶಿಸುತ್ತಿದ್ದೇವೆ. ಆದರೆ ಯಾವುದರಲ್ಲಿಯೂ ತಳಸ್ಪರ್ಶಿಯಾಗುತ್ತಿಲ್ಲ. ಯಾವುದಾದರೂ ಒಂದು ವಿಷಯದಲ್ಲಿ ಸ್ಥಿರವಾದ ಗಮನವನ್ನು ನೆಲೆನಿಲ್ಲಿಸಿದಾಗ ಸಾಕ್ಷಾತ್ಕಾರವನ್ನು ಹೊಂದಬಹುದು ಎಂದು ಅಭಿಪ್ರಾಯಪಟ್ಟರು.


ದೇಹದಲ್ಲಿ ಚಟುವಟಿಕೆಗಳು ಕಡಿಮೆ ಇದ್ದಾಗ ಕಡಿಮೆ ಆಹಾರ ಸಾಕು. ಕಾರ್ಯಚಟುವಟಿಕೆ ಹೆಚ್ಚಿದ್ದಾಗ ಆಹಾರದ ಅವಶ್ಯಕತೆಯೂ ಸಹಜವಾಗಿ ಹೆಚ್ಚಾಗುತ್ತದೆ. ಧ್ಯಾನಮಾರ್ಗದಲ್ಲಿ ಸಾಗುವಾಗಲೂ ಕಡಿಮೆ ಆಹಾರ ಸಾಕಾಗುತ್ತದೆ. ಬಾಹ್ಯ ಚಟುವಟಿಕೆಗಳು ಇಲ್ಲದೇ ಇರುವುದರಿಂದ ಸಮಾಧಿ ಸ್ಥಿತಿಯ ಪೂರ್ವದಲ್ಲಿ ಗಾಳಿ ಮಾತ್ರವೂ ಸಾಕಾಗಬಹುದು. ಸಮಾಧಿ ಸ್ಥಿತಿಯಲ್ಲಿ ಉಸಿರಾಟವಾಗಲಿ, ಹೃದಯ ಬಡಿತವಾಗಲಿ ಯಾವುದೂ ಇರುವುದಿಲ್ಲ. ಹಾಗಾಗಿ ಯಾವುದೇ ಆಹಾರವಿಲ್ಲದೇ ಜೀವಿ ಬದುಕಿರುತ್ತಾನೆ. ತಪಸ್ಸು ಎನ್ನುವಾಗ ದೇಹದ ಬಾಹ್ಯ ಚಟುವಟಿಕೆಗಳು ಕಡಿಮೆಯಾಗುತ್ತದೆ, ಮನಸ್ಸು ಮಾತ್ರ ದೇವರ ಕಡೆಗೆ ಏಕಾಗ್ರವಾಗುತ್ತದೆ. ಏಕಾಗ್ರತೆ ಹೆಚ್ಚಾಗುತ್ತಾ ಹೋದಂತೆ ದೇವರನ್ನು ಸಾಕ್ಷಾತ್ಕರಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಉದ್ಯಮಿ ಗೋಪಾಲಕೃಷ್ಣ ಭಟ್ ದ್ವಾರಕಾ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಡಾ. ವೈ. ವಿ ಕೃಷ್ಣಮೂರ್ತಿ , ಉದ್ಯಮಿ ವಿನಾಯಕ ಹೆಗಡೆ ಕಟ್ಟೆ, ಗಣೇಶ ಆರ್ಕೊಡ್ಲು, ವೇ.ಮೂ. ಮಂಜುನಾಥ ಭಟ್ ಅಗ್ನಿಹೋತ್ರಿ, ಲೋಹಿತ ಹೆಬ್ಬಾರ್, ಹರೀಶ್ ಹೆಗಡೆ, ದಿನಪ್ರಧಾನರಾಗಿ ಕೊಲ್ಲಂಪಾರೆ ನಾರಾಯಣ ಭಟ್ ದಂಪತಿಗಳು ಉಪಸ್ಥಿತರಿದ್ದರು.

## ಅಸಮರ್ಥ ಗೃಹ ಸಚಿವರು ಬೇಕಾಗಿಲ್ಲ': ಛಲವಾದಿ ನಾರಾಯಣಸ್ವಾಮಿ

● ವಿಕ್ರಮ ವಾಹಿನಿ । ಬೆಂಗಳೂರು

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೊಲೆ, ಅತ್ಯಾಚಾರ ಸೇರಿದಂತೆ ಗಂಭೀರ ಅಪರಾಧಗಳು ನಡೆಯುತ್ತಿದ್ದರೂ ಸರ್ಕಾರ ಮತ್ತು ಗೃಹ ಸಚಿವರು ಸೂಕ್ತ ಗಮನ ಹರಿಸುತ್ತಿಲ್ಲ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.



ಲಿಂಗಸುಗೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಯಚೂರು ಜಿಲ್ಲೆಯಲ್ಲಿ ಕಳೆದ 15 ದಿನಗಳಲ್ಲಿ ದಲಿತ ನಾಯಕನ ಹತ್ಯೆ ಸೇರಿದಂತೆ ಮೂರು ಗಂಭೀರ ಘಟನೆಗಳು ನಡೆದಿವೆ. ಎರಡು ಅತ್ಯಾಚಾರ ಹಾಗೂ ಕೊಲೆ ಪ್ರಕರಣಗಳೂ ನಡೆದಿದ್ದು, ಇಂತಹ ಘಟನೆಗಳ ಬಗ್ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿಲ್ಲ ಎಂದು ದೂರಿದರು.

"ಗೃಹ ಇಲಾಖೆಯನ್ನು ನಿಭಾಯಿಸುವಲ್ಲಿ ಪ್ರಿಯಾಂಕ್ ಖರ್ಗೆ ವಿಫಲರಾಗಿದ್ದಾರೆ. ರಾಜ್ಯಕ್ಕೆ ಸಮರ್ಥ ಗೃಹ ಸಚಿವರ ಅಗತ್ಯವಿದೆ. ಮುಖ್ಯಮಂತ್ರಿಗಳು ಈ ಬಗ್ಗೆ ಗಂಭೀರವಾಗಿ ಗಮನಹರಿಸಿ, ಬೇರೊಬ್ಬರಿಗೆ ಗೃಹ ಖಾತೆ ನೀಡಬೇಕು" ಎಂದು ಆಗ್ರಹಿಸಿದರು.

ಕಲ್ಯಾಣ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಗಾಂಜಾ ಮತ್ತು ಮಾದಕ ವಸ್ತುಗಳ ಹಾವಳಿ ಹೆಚ್ಚಾಗಿದ್ದು, ಇದಕ್ಕೆ ಕಡಿವಾಣ ಹಾಕಲು ಕಠಿಣ ಕ್ರಮ ಅಗತ್ಯವಾಗಿದೆ. ಡ್ರಗ್ಸ್ ಬಳಕೆಯಿಂದಲೇ ಹಲವು ಅಪರಾಧಗಳು ನಡೆಯುತ್ತಿವೆ ಎಂಬ ಆರೋಪಗಳಿದ್ದು, ಮಾರಾಟದ ಜಾಲದ ಹಿಂದಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದರು ಕೊಲೆ ಮತ್ತು ಅತ್ಯಾಚಾರ ಪ್ರಕರಣಗಳನ್ನು ವಿಧಾನಮಂಡಲದ ಅಧಿವೇಶನದಲ್ಲಿಯೇ ಪ್ರಸ್ತಾಪಿಸಿದ್ದರೂ ಸೂಕ್ತ ಪ್ರಾಮುಖ್ಯತೆ ದೊರೆಯಲಿಲ್ಲ. ಸ್ಥಳಕ್ಕೆ ಭೇಟಿ ನೀಡಿದಾಗ ಮಾತ್ರ ವಾಸ್ತವ ಪರಿಸ್ಥಿತಿ ತಿಳಿಯುತ್ತದೆ. ಸರ್ಕಾರ ಮತ್ತು ಅಧಿಕಾರಿಗಳ ವರದಿಗಳಿಗಿಂತ ನೊಂದವರ ಕುಟುಂಬಗಳನ್ನು ಭೇಟಿ ಮಾಡಿ ಮಾಹಿತಿ ಸಂಗ್ರಹಿಸುವುದು ಮುಖ್ಯ ಎಂದು ಹೇಳಿದರು.

ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದು ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಬೇಕು. ಈ ಕರ್ತವ್ಯವನ್ನು ನಿರ್ಲಕ್ಷಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಹಾಗೂ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆಯುವುದಾಗಿ ತಿಳಿಸಿದರು.

"ದಲಿತರು ಸೇರಿದಂತೆ ನೊಂದವರಿಗೆ ನ್ಯಾಯ ದೊರೆಯಬೇಕು. ಅಪರಾಧಗಳಿಗೆ ಕಾರಣರಾದವರು ಯಾರೇ ಆಗಿದ್ದರೂ ಅವರನ್ನು ಪತ್ತೆಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು. ಕಲ್ಯಾಣ ಕರ್ನಾಟಕದಲ್ಲಿ ನಡೆಯುತ್ತಿರುವ ಕೊಲೆ, ಅತ್ಯಾಚಾರ ಮತ್ತು ಮಾದಕ ವಸ್ತುಗಳ ಹಾವಳಿಗೆ ಸರ್ಕಾರ ತಕ್ಷಣ ಕಡಿವಾಣ ಹಾಕಬೇಕು" ಎಂದು ಛಲವಾದಿ ನಾರಾಯಣಸ್ವಾಮಿ ಒತ್ತಾಯಿಸಿದರು.

## 'ಟಾಕ್ಸಿಕ್' ವಿಮರ್ಶೆ: ಯೂಟ್ಯೂಬರ್‌ಗೆ ಲೀಗಲ್ ನೋಟಿಸ್

1ನೇ ಪುಟದಿಂದ

'ಟಾಕ್ಸಿಕ್' ಚಿತ್ರಕ್ಕೆ ಸಂಬಂಧಿಸಿದಂತೆ ಡಿಜಿಟಲ್ ಹಾಗೂ ಆನ್‌ಲೈನ್ ಮಾಧ್ಯಮಗಳಲ್ಲಿ ಕಾಪಿರೈಟ್ ಉಲ್ಲಂಘಿಸುವ, ಸುಳ್ಳು ಅಥವಾ ನಿಂದನಾತ್ಮಕ ವಿಷಯಗಳನ್ನು ಹಂಚಿಕೊಳ್ಳದಂತೆ ನೋಟಿಸ್‌ನಲ್ಲಿ ಸೂಚಿಸಲಾಗಿದೆ.

ನೋಟಿಸ್ ಕುರಿತು ಪ್ರತಿಕ್ರಿಯಿಸಿರುವ ಸೂರಜ್ ಕುಮಾರ್, ತಮ್ಮ ವಿಮರ್ಶೆಗೆ ಲೀಗಲ್ ನೋಟಿಸ್ ನೀಡಿದ್ದಕ್ಕಾಗಿ 'ಟಾಕ್ಸಿಕ್' ಚಿತ್ರತಂಡಕ್ಕೆ ಧನ್ಯವಾದಗಳು ಎಂದು ವ್ಯಂಗ್ಯವಾಗಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ.

ಆಗಸ್ಟ್ 26ರಂದು 'ಟಾಕ್ಸಿಕ್' ಪ್ಯಾನ್ ಇಂಡಿಯಾ ಮಟ್ಟದಲ್ಲಿ ತೆರೆಕಂಡಿದ್ದು, ಚಿತ್ರಕ್ಕೆ ಪ್ರೇಕ್ಷಕರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ವಿಮರ್ಶಕರ ವಿರುದ್ಧ ಚಿತ್ರತಂಡಗಳು ಕಾನೂನು ನೋಟಿಸ್ ನೀಡಿರುವ ವಿಚಾರ ಈ ಹಿಂದೆಯೂ ಚರ್ಚೆಗೆ ಕಾರಣವಾಗಿದ್ದು, ಇದೀಗ 'ಟಾಕ್ಸಿಕ್' ಪ್ರಕರಣವೂ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಯಾಗುತ್ತಿದೆ.

## ಲೈಸೆನ್ಸ್ ಇಲ್ಲದೆ ಸ್ವೀಟ್ಸ್ ತಯಾರಿ; 200 ಕೆಜಿ ಸಿಹಿತಿಂಡಿ ಸೀಜ್

● ವಿಕ್ರಮ ವಾಹಿನಿ । ಲಖನೌ

ಕರ್ನಾಟಕ ಮತ್ತು ದೆಹಲಿಯಲ್ಲಿ ಕಲಬೆರಕೆ ಆಹಾರದ ವಿರುದ್ಧ ತಪಾಸಣೆ ತೀವ್ರಗೊಂಡಿರುವ ಬೆನ್ನಲ್ಲೇ ಉತ್ತರ ಪ್ರದೇಶದಲ್ಲೂ ಆಹಾರ ಸುರಕ್ಷತಾ ಇಲಾಖೆ ಕಾರ್ಯಾಚರಣೆ ನಡೆಸಿದೆ. ಲಖನೌನ ನೀವಾ ಖಾಸಿಂ ಖೇಡಾ ಪ್ರದೇಶದಲ್ಲಿರುವ ರಿಂಕು ಸ್ವೀಟ್ಸ್ ಘಟಕದ ಮೇಲೆ ದಾಳಿ ನಡೆಸಿದ ಅಧಿಕಾರಿಗಳು, ಆಹಾರ ಸುರಕ್ಷತಾ ನಿಯಮ ಉಲ್ಲಂಘಿಸಿ ತಯಾರಿಸಲಾಗಿದ್ದ ಸುಮಾರು 200 ಕೆಜಿ ಸಿಹಿತಿಂಡಿಗಳನ್ನು ವಶಪಡಿಸಿಕೊಂಡು ಸ್ಥಳದಲ್ಲೇ ನಾಶಪಡಿಸಿದ್ದಾರೆ.

ಆಹಾರ ಸುರಕ್ಷತಾ ಅಧಿಕಾರಿಗಳ ತಂಡ ದಿಢೀರ್ ತಪಾಸಣೆ ನಡೆಸಿದ ವೇಳೆ ಘಟಕದಲ್ಲಿ ಸ್ವಚ್ಛತೆಯ ಕೊರತೆ ಕಂಡುಬಂದಿದೆ. ಮಾನವ ಬಳಕೆಗೆ ಯೋಗ್ಯವಲ್ಲದ ಗುಣಮಟ್ಟದ ಸಿಹಿತಿಂಡಿಗಳನ್ನು ತಯಾರಿಸಲಾಗುತ್ತಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸುಮಾರು 20 ಸಾವಿರ ಮೌಲ್ಯದ ಪೇಡಾ ಸೇರಿದಂತೆ ವಿವಿಧ ಸಿಹಿತಿಂಡಿಗಳನ್ನು ವಶಪಡಿಸಿಕೊಳ್ಳಲಾಗಿದೆ.

**180 ಲೀಟರ್ ಎಣ್ಣೆ ಸೀಜ್**

ಸಿಹಿತಿಂಡಿಗಳ ಜತೆಗೆ ಸುಮಾರು 40,860 ಮೌಲ್ಯದ 180 ಲೀಟರ್ ಸಂಸ್ಕರಿಸಿದ ಸೋಯಾಬೀನ್ ಎಣ್ಣೆಯನ್ನೂ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಘಟಕದಲ್ಲಿ ಬಳಸುತ್ತಿದ್ದ ಕಚ್ಚಾ ವಸ್ತುಗಳ ಗುಣಮಟ್ಟದ ಬಗ್ಗೆಯೂ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

ಲ್ಯಾಬ್ ಪರೀಕ್ಷೆಗೆ ಮಾದರಿ ಪೇಡಾ, ಸ್ಕಿಮ್ಡ್ ಮಿಲ್ಕ್ ಪೌಡರ್, ಸೋಯಾಬೀನ್ ಎಣ್ಣೆ ಹಾಗೂ ಸಿಹಿತಿಂಡಿಗಳಲ್ಲಿ ಬಳಸಲಾಗುತ್ತಿದ್ದ ಬೆಳ್ಳಿ ಖಾದ್ಯ ಹಾಳೆಯ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸಲಾಗಿದೆ. ಪರೀಕ್ಷಾ ವರದಿ ಬಂದ ಬಳಿಕ ಆಹಾರ ಸುರಕ್ಷತಾ ನಿಯಮ ಉಲ್ಲಂಘನೆಯ ಸ್ವರೂಪ ಸ್ಪಷ್ಟವಾಗಲಿದ್ದು, ಅದರ ಆಧಾರದ ಮೇಲೆ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಪರವಾನಗಿ ಇಲ್ಲದೆ ಕಾರ್ಯಾಚರಣೆ**

ರಿಂಕು ಸ್ವೀಟ್ಸ್ ಘಟಕವು ಅಗತ್ಯ ಮಾನ್ಯ ಆಹಾರ ಪರವಾನಗಿ ಪಡೆಯದೆ ಕಾರ್ಯನಿರ್ವಹಿಸುತ್ತಿರುವುದು ತಪಾಸಣೆ ವೇಳೆ ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಘಟಕವನ್ನು ತಕ್ಷಣವೇ ಬಂದ್ ಮಾಡಲಾಗಿದೆ. ಆಹಾರ ತಯಾರಿಸುವ ಸ್ಥಳದಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡದಿರುವುದನ್ನೂ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿದ್ದಾರೆ.

ಆಹಾರ ಉತ್ಪಾದನಾ ಘಟಕಗಳು ಕಡ್ಡಾಯವಾಗಿ ಪರವಾನಗಿ ಪಡೆದು, ನಿಗದಿತ ಸುರಕ್ಷತಾ ಹಾಗೂ ನೈರ್ಮಲ್ಯ ನಿಯಮಗಳನ್ನು ಪಾಲಿಸಬೇಕು. ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಇಂತಹ ಘಟಕಗಳ ವಿರುದ್ಧ ತಪಾಸಣೆ ಹಾಗೂ ಕ್ರಮ ಮುಂದುವರಿಸಲಾಗುವುದು ಎಂದು ಆಹಾರ ಸುರಕ್ಷತಾ ಅಧಿಕಾರಿಗಳು ತಿಳಿಸಿದ್ದಾರೆ.

## 'ಟಾಕ್ಸಿಕ್' ಮೊದಲ ದಿನವೇ 150 ಕೋಟಿ ಗಳಿಕೆ: ಚಿತ್ರತಂಡ

● ವಿಕ್ರಮ ವಾಹಿನಿ । ಬೆಂಗಳೂರ

ರಾಕಿಂಗ್ ಸ್ಟಾರ್ ಯಶ್ ಅಭಿನಯದ ಬಹುನಿರೀಕ್ಷಿತ 'ಟಾಕ್ಸಿಕ್' ಸಿನಿಮಾ ಬಿಡುಗಡೆಯಾದ ಮೊದಲ ದಿನವೇ ಭರ್ಜರಿ ಗಳಿಕೆ ಮಾಡಿದೆ. ಚಿತ್ರತಂಡದ ಅಧಿಕೃತ ಮಾಹಿತಿಯಂತೆ, ಸಿನಿಮಾ ವಿಶ್ವಾದ್ಯಂತ ಮೊದಲ ದಿನ 150 ಕೋಟಿಗೂ ಅಧಿಕ ಗಳಿಕೆ ದಾಖಲಿಸಿದೆ.

ಆಗಸ್ಟ್ 26ರಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ತೆರೆಕಂಡ 'ಟಾಕ್ಸಿಕ್'ಗೆ ಬಿಡುಗಡೆಯ ಮುನ್ನವೇ ಭಾರಿ ನಿರೀಕ್ಷೆ ಮೂಡಿತ್ತು. ಮುಂಗಡ ಟಿಕೆಟ್ ಬುಕ್ಕಿಂಗ್ ಕೂಡ ಉತ್ತಮವಾಗಿದ್ದು, ಹಲವು ಚಿತ್ರಮಂದಿರಗಳಲ್ಲಿ ಮೊದಲ ದಿನದ ಬಹುತೇಕ ಪ್ರದರ್ಶನಗಳು ಹೌಸ್‌ಫುಲ್ ಆಗಿದ್ದವು. ಟಿಕೆಟ್ ದರ ಏರಿಕೆಯೂ ಆರಂಭಿಕ ಗಳಿಕೆಗೆ ನೆರವಾಗಿದೆ ಎನ್ನಲಾಗಿದೆ.

ಕೆವಿಎನ್ ಪ್ರೊಡಕ್ಷನ್ಸ್ ನಿರ್ಮಾಣದ ಈ ಚಿತ್ರದಲ್ಲಿ ಯಶ್ ಜತೆಗೆ ರುಕ್ಮಿಣಿ ವಸಂತ್, ಕಿಯಾರಾ ಅಡ್ವಾಣಿ, ಹುಮಾ ಖುರೇಷಿ, ನಯನತಾರಾ ಹಾಗೂ ತಾರಾ ಸುತಾರಿಯಾ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಚಿತ್ರದಲ್ಲಿ ಅದ್ದೂರಿ ಮೇಕಿಂಗ್, ಆಕ್ಷನ್ ದೃಶ್ಯಗಳು ಹಾಗೂ ವಿಭಿನ್ನ ಕಥಾಹಂದರಕ್ಕೆ ಒತ್ತು ನೀಡಲಾಗಿದೆ.

ಬಿಡುಗಡೆಯ ಬಳಿಕ ಚಿತ್ರಕ್ಕೆ ಪ್ರೇಕ್ಷಕರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದ್ದರೂ, ಮೊದಲ ದಿನದ ಗಳಿಕೆ ಭರ್ಜರಿಯಾಗಿದೆ. ಮುಂದಿನ ದಿನಗಳಲ್ಲಿ ಚಿತ್ರದ ಗಳಿಕೆ ಯಾವ ಮಟ್ಟ ತಲುಪಲಿದೆ ಎಂಬುದು ಕುತೂಹಲ ಮೂಡಿಸಿದೆ.

## '175 ತಾಲೂಕುಗಳಲ್ಲಿ ಬರ ಘೋಷಿಸಿ, ರೈತರ ಸಾಲ ಮನ್ನಾ ಮಾಡಿ'

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರ ಕಾಟಾಚಾರಕ್ಕೆ ಬರಗಾಲ ಘೋಷಿಸಿದ್ದು, ತಕ್ಷಣವೇ 175 ತಾಲೂಕುಗಳಲ್ಲಿ ಬರ ಘೋಷಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ 89 ತಾಲೂಕುಗಳಲ್ಲಿ ತೀವ್ರ ಹಾಗೂ 12 ತಾಲೂಕುಗಳಲ್ಲಿ ಸಾಧಾರಣ ಬರ ಘೋಷಿಸಲಾಗಿದೆ. ಆದರೆ ವಾಸ್ತವ ಪರಿಸ್ಥಿತಿ ಗಮನಿಸಿದರೆ 175 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕಿತ್ತು. ಹಣದ ಕೊರತೆಯಿಂದ ತಾಲೂಕುಗಳ ಸಂಖ್ಯೆಯನ್ನು ಕಡಿಮೆ ಮಾಡಲಾಗಿದೆ ಎಂದು ಆರೋಪಿಸಿದರು.

ಪ್ರತಿ ತಾಲೂಕಿಗೆ ಕೇವಲ 1 ಕೋಟಿ ನೀಡಲಾಗಿದೆ. ರೈತರಿಗೆ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು ಎಂಬ ಬೇಡಿಕೆಯನ್ನು ಸರ್ಕಾರ ಪರಿಗಣಿಸಿಲ್ಲ. ಮೇವು, ಕುಡಿಯುವ ನೀರು ಹಾಗೂ ಬೋರ್‌ವೆಲ್‌ಗಳ ವ್ಯವಸ್ಥೆ ಕುರಿತು ಸರ್ಕಾರ ಸ್ಪಷ್ಟ ಮಾಹಿತಿ ನೀಡಬೇಕು. ಬರ ಘೋಷಣೆಯ ಜೊತೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಮತ್ತು ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನೂ ಕಂದಾಯ ಸಚಿವರು ತಿಳಿಸಬೇಕು ಎಂದು ಒತ್ತಾಯಿಸಿದರು.

**ರೈತರ ಸಾಲ ಮನ್ನಾ ಮಾಡಿ**

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಲ ಮನ್ನಾ ಕುರಿತು ಘೋಷಿಸಿ ಎರಡು ತಿಂಗಳು ಕಳೆದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಪ್ರತಿ ರೈತನ ಕನಿಷ್ಠ 1 ಲಕ್ಷ ಸಾಲ ಮನ್ನಾ ಮಾಡಬೇಕು. ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಸೃಷ್ಟಿಸುವ ಮೂಲಕ ಜನರ ವಲಸೆ ತಡೆಯಲು ವಿಬಿಜಿ ರಾಮ್‌ಜಿ ಯೋಜನೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಅಶೋಕ ಹೇಳಿದರು.

ಕಲಬುರಗಿ ಸೇರಿದಂತೆ ಹಲವು ಭಾಗಗಳಿಂದ ಜನರು ವಲಸೆ ಹೋಗುತ್ತಿದ್ದು, ಮಕ್ಕಳ ಶಿಕ್ಷಣವೂ ಸ್ಥಗಿತಗೊಳ್ಳುತ್ತಿದೆ. ವಲಸೆ ಕಾರ್ಮಿಕರ ಸುರಕ್ಷತೆ ಹಾಗೂ ಮಕ್ಕಳ ಶಿಕ್ಷಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

**'ನಾಗೇಂದ್ರ ರಾಜೀನಾಮೆ ಖಚಿತ'**

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ.ನಾಗೇಂದ್ರ ವಿರುದ್ಧ ತಮ್ಮ ಹೋರಾಟ ಮುಂದುವರಿಯಲಿದೆ. ನಾಗೇಂದ್ರ ರಾಜೀನಾಮೆ ನೀಡುವುದು ಖಚಿತ. ಸಿಬಿಐ ಹಾಗೂ ಜಾರಿ ನಿರ್ದೇಶನಾಲಯದ ತನಿಖೆಗೆ ಅನುಮತಿ ನೀಡುವಂತೆ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ನಮ್ಮ ಹೋರಾಟಕ್ಕೆ ಬೆಲೆ ಸಿಗಲಿದೆ. ಒಂದು ವಾರದೊಳಗೆ ಈ ಬಗ್ಗೆ ತೀರ್ಮಾನವಾಗದಿದ್ದರೆ ಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ಅಶೋಕ ಎಚ್ಚರಿಕೆ ನೀಡಿದರು.

ಬಿಡದಿ ಟೌನ್‌ಶಿಪ್, ನೈಸ್ ಸೇರಿದಂತೆ ವಿವಿಧ ವಿಷಯಗಳ ಕುರಿತು ಮುಂದಿನ ವಿಧಾನಮಂಡಲ ಅಧಿವೇಶನದಲ್ಲೂ ಹೋರಾಟ ಮುಂದುವರಿಸುವುದಾಗಿ ಅವರು ತಿಳಿಸಿದರು. ರಾಜ್ಯದಲ್ಲಿ ಸಮಿತಿಗಳ ರಚನೆಯಷ್ಟೇ ಸಾಕಾಗುವುದಿಲ್ಲ; ಯೋಜನೆ ರೂಪಿಸುವ ಇಲಾಖೆ, ಅನುದಾನ ಹಾಗೂ ಅನುಷ್ಠಾನಕ್ಕೆ ಸಮರ್ಥ ಅಧಿಕಾರಿಗಳ ಅಗತ್ಯವಿದೆ ಎಂದರು.



# ಗ್ರಾಮೀಣ ಜಲ ಆಸ್ತಿಗಳ ನಿರ್ವಹಣೆಗೆ ಜಿಐಎಸ್ ಆಧಾರಿತ ಆಪ್: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮೀಣ ಪ್ರದೇಶಗಳ ಜಲ ಆಸ್ತಿಗಳ ವೈಜ್ಞಾನಿಕ ನಿರ್ವಹಣೆ, ಪಾರದರ್ಶಕತೆ ಹೆಚ್ಚಿಸುವುದು ಹಾಗೂ ನಕಲಿ ಬಿಲ್‌ಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಜಿಐಎಸ್ ಆಧಾರಿತ ಮೊಬೈಲ್ ಮತ್ತು ವೆಬ್ ಅಪ್ಲಿಕೇಷನ್ ಅಭಿವೃದ್ಧಿಪಡಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಮೊಬೈಲ್ ಮತ್ತು ವೆಬ್ ಅಪ್ಲಿಕೇಷನ್ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ರಾಜ್ಯದಲ್ಲಿರುವ 3 ಲಕ್ಷಕ್ಕೂ ಅಧಿಕ ಜಲ ಆಸ್ತಿಗಳನ್ನು ಸೆಪ್ಟೆಂಬರ್ ಅಂತ್ಯದೊಳಗೆ ಡಿಜಿಟಲೀಕರಣಗೊಳಿಸಲಾಗುವುದು. ಈಗಾಗಲೇ 70 ಸಾವಿರಕ್ಕೂ ಅಧಿಕ ಜಲ ಆಸ್ತಿಗಳ ದಾಖಲೀಕರಣ ಪೂರ್ಣಗೊಂಡಿದೆ ಎಂದರು.

ಮೂರು ಹಂತದ ಪರಿಶೀಲನೆ: ಆಪ್ ಮೂಲಕ ಬೋರ್‌ವೆಲ್, ಓವರ್‌ಹೆಡ್ ಟ್ಯಾಂಕ್, ತೆರೆದ ಬಾವಿ, ಪಂಪ್‌ಹೌಸ್, ಜಲಶುದ್ಧೀಕರಣ ಘಟಕ, ಕೆರೆ, ಪ್ರಯೋಗಾಲಯ ಹಾಗೂ ಕೈಪಂಪ್ ಸೇರಿದಂತೆ ಎಲ್ಲ ಜಲ ಆಸ್ತಿಗಳನ್ನು ಕಡ್ಡಾಯವಾಗಿ ಜಿಯೋ ಟ್ಯಾಗ್ ಮಾಡಲಾಗುವುದು. 5 ಮೀಟರ್ ನಿಖರತೆಯಲ್ಲಿ ಆಸ್ತಿಗಳ ಮಾಹಿತಿ ದಾಖಲೆಯಾಗಲಿದೆ.

ಜಲ ಆಸ್ತಿಗಳ ಪರಿಶೀಲನೆ ಮೂರು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತದಲ್ಲಿ ಎಂಜಿನಿಯರ್‌ಗಳು ಶೇ.100ರಷ್ಟು ಆಸ್ತಿಗಳನ್ನು ಸ್ಥಳದಲ್ಲೇ ಪರಿಶೀಲಿಸಲಿದ್ದಾರೆ. ಎರಡನೇ ಹಂತದಲ್ಲಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್‌ಗಳು ಶೇ.5ರಷ್ಟು ಹಾಗೂ ಮೂರನೇ ಹಂತದಲ್ಲಿ ಕಾರ್ಯಪಾಲಕ ಎಂಜಿನಿಯರ್‌ಗಳು ಶೇ.2ರಷ್ಟು ಆಸ್ತಿಗಳನ್ನು ಯಾದೃಚ್ಛಿಕವಾಗಿ ಪರಿಶೀಲಿಸಲಿದ್ದಾರೆ. ಲೋಪ ಕಂಡುಬಂದರೆ ಸಂಬಂಧಪಟ್ಟ ಗುತ್ತಿಗೆದಾರರು ಹಾಗೂ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಚಿವರು ಎಚ್ಚರಿಸಿದರು.

ನಕಲಿ ಬಿಲ್‌ಗೆ ಕಡಿವಾಣ: ಜಿಯೋ ಟ್ಯಾಗಿಂಗ್‌ನಿಂದ ಕಾಮಗಾರಿ ನಡೆಸದೇ ನಕಲಿ ಬಿಲ್ ಸೃಷ್ಟಿಸುವುದಕ್ಕೆ ಕಡಿವಾಣ ಬೀಳಲಿದೆ. ಬೋರ್‌ವೆಲ್ ಎಷ್ಟು ಆಳಕ್ಕೆ ಕೊರೆಲಾಗಿದೆ, ಪೈಪ್ ಎಷ್ಟು ಅಡಿ ಅಳವಡಿಸಲಾಗಿದೆ ಹಾಗೂ ಮೋಟರ್‌ನ ಸಾಮರ್ಥ್ಯ ಸೇರಿದಂತೆ ಸಂಪೂರ್ಣ ಮಾಹಿತಿ ದಾಖಲೆಯಾಗುವುದರಿಂದ ಕಾಮಗಾರಿಗಳ ಗುಣಮಟ್ಟ ಪರಿಶೀಲನೆಗೂ ಅನುಕೂಲವಾಗಲಿದೆ ಎಂದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಕರ್ನಾಟಕ ದೂರ ಸಂವೇದಿ ಅನ್ವಯಿಕ ಕೇಂದ್ರದ ಸಹಯೋಗದಲ್ಲಿ ಆಪ್ ಅಭಿವೃದ್ಧಿಪಡಿಸಲಾಗಿದೆ. ಅಧಿಕಾರಿಗಳಿಗೆ ಈಗಾಗಲೇ




ತರಬೇತಿ ನೀಡಲಾಗಿದ್ದು, ಹೊಸ ವ್ಯವಸ್ಥೆಯ ಮೂಲಕ ಇಲಾಖೆಯಲ್ಲಿ ಹೆಚ್ಚಿನ ಪಾರದರ್ಶಕತೆ ತರಲಾಗುವುದು ಎಂದು ಖಂಡ್ರೆ ಹೇಳಿದರು.

7,700 ಕೊಳವೆಬಾವಿಗಳ ಮರುಪೂರಣ: ನಿಷ್ಕ್ರಿಯವಾಗಿರುವ ಕೊಳವೆಬಾವಿಗಳ ಪಂಪ್‌ಸೆಟ್ ಮತ್ತು ವಿದ್ಯುತ್ ಸಂಪರ್ಕವನ್ನು ತೆರವುಗೊಳಿಸಿ, ಅನಗತ್ಯ ವಿದ್ಯುತ್ ಬಿಲ್ ಹೊರೆಯಾಗದಂತೆ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಬತ್ತಿಹೋಗಿರುವ ಕೊಳವೆಬಾವಿಗಳ ಮರುಪೂರಣಕ್ಕೆ ವಿಬಿಜಿ ರಾಮ್‌ಜಿ ಯೋಜನೆಯಡಿ ಕ್ರಮ ಕೈಗೊಳ್ಳಲಾಗಿದ್ದು, ಈಗಾಗಲೇ 7,700 ಕೊಳವೆಬಾವಿಗಳನ್ನು ರೀಚಾರ್ಜ್ ಮಾಡಲಾಗಿದೆ. ರಾಜ್ಯದಲ್ಲಿ ಸರ್ಕಾರಿ ವತಿಯಿಂದ ಕೊರೆದಿರುವ ಕೊಳವೆಬಾವಿಗಳ ಸಂಖ್ಯೆ, ನಿಷ್ಕ್ರಿಯವಾಗಿರುವ ಹಾಗೂ ಮರುಪೂರಣಕ್ಕೆ ಅರ್ಹವಾಗಿರುವ ಬೋರ್‌ವೆಲ್‌ಗಳ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದರು.

ಕುಡಿಯುವ ನೀರಿಗೆ ಹಣದ ಕೊರತೆ ಇಲ್ಲ: ರಾಜ್ಯದಲ್ಲಿ ಕುಡಿಯುವ ನೀರಿಗೆ ಹಣಕಾಸಿನ ಕೊರತೆಯಿಲ್ಲ. ಈಗಾಗಲೇ ರೂ 117 ಕೋಟಿ ಮುಂಗಡವಾಗಿ ಬಿಡುಗಡೆ ಮಾಡಲಾಗಿದೆ.

ದಿನಕ್ಕೆ 5 ಲಕ್ಷ ಮಾನವ ದಿನ ಸೃಷ್ಟಿ ಗುರಿ: ಗ್ರಾಮೀಣ ಜನರು ಗುಳೆ ಹೋಗದಂತೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ಜುಲೈ 1ರಿಂದ ಈವರೆಗೆ 74.77 ಲಕ್ಷ ಮಾನವ ದಿನ ಸೃಷ್ಟಿಸಲಾಗಿದ್ದು, ಪ್ರಸ್ತುತ ಪ್ರತಿದಿನ 3 ಲಕ್ಷಕ್ಕೂ ಅಧಿಕ ಮಾನವ ದಿನ ಸೃಷ್ಟಿಯಾಗುತ್ತಿದೆ. ದಿನಕ್ಕೆ 5 ಲಕ್ಷ ಮಾನವ ದಿನ ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದು ಈಶ್ವರ ಖಂಡ್ರೆ ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## 'ಗ್ರಾಮ ವಿಕಾಸವೇ ಪಿಡಿಒಗಳ ಪ್ರಮುಖ ಗುರಿಯಾಗಲಿ'



● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮಗಳ ಸಮಗ್ರ ಅಭಿವೃದ್ಧಿಯೇ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಪ್ರಮುಖ ಧ್ಯೇಯವಾಗಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಗ್ರೇಡ್ 1 ಕಾರ್ಯದರ್ಶಿ ಹುದ್ದೆಯಿಂದ ಪಿಡಿಒಗಳಾಗಿ ಮುಂಬಡ್ತಿ ಪಡೆದ 528 ಸಿಬ್ಬಂದಿಗೆ ನಿಷ್ಠೆ, ದಕ್ಷತೆ ಮತ್ತು ಪ್ರಾಮಾಣಿಕತೆಯ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು.

ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು, ರಸ್ತೆ, ಚರಂಡಿ, ಕೆರೆ ಅಭಿವೃದ್ಧಿ ಸೇರಿದಂತೆ ಮೂಲಸೌಕರ್ಯ ಕಲ್ಪಿಸುವಲ್ಲಿ ಪಂಚಾಯಿತಿಗಳ ಪಾತ್ರ ಮಹತ್ವದ್ದಾಗಿದೆ. ಪಿಡಿಒಗಳು ತಮ್ಮ ಜವಾಬ್ದಾರಿಯನ್ನು ಅರಿತು ಪ್ರಾಮಾಣಿಕವಾಗಿ ಹಾಗೂ ದಕ್ಷತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸಚಿವರು ಸೂಚಿಸಿದರು.

ರಾಜ್ಯದಲ್ಲಿ ಮಳೆಯ ಕೊರತೆ ಹಿನ್ನೆಲೆಯಲ್ಲಿ ಯಾರೊಬ್ಬರೂ ಗುಳೆ ಹೋಗದಂತೆ ಕ್ರಮ ಕೈಗೊಳ್ಳಬೇಕು. ಆರ್ಥಿಕ ಹೊರೆಯಾಗಿದ್ದರೂ ರಾಜ್ಯ ಸರ್ಕಾರ ವಿಬಿಜಿ ರಾಮ್ ಜಿ ಯೋಜನೆಯನ್ನು ಜಾರಿಗೊಳಿಸಿದೆ. ಗ್ರಾಮೀಣ ಪ್ರದೇಶಗಳಲ್ಲಿ ಗುಣಮಟ್ಟದ ಆಸ್ತಿಗಳನ್ನು ಸೃಜಿಸುವುದರ ಜತೆಗೆ ಬಡ ಹಾಗೂ ಶೋಷಿತ ವರ್ಗದವರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಪಿಡಿಒಗಳು ಕಾರ್ಯನಿರ್ವಹಿಸಬೇಕು ಎಂದರು.

ಅಂತರ್ಜಲ ಹೆಚ್ಚಳ, ಕೊಟ್ಟಿಗೆ, ರಸ್ತೆ ಹಾಗೂ ಕಾಲುವೆ ನಿರ್ಮಾಣ ಸೇರಿದಂತೆ 318 ಬಗೆಯ ಕಾಮಗಾರಿಗಳನ್ನು ಯೋಜನೆಯಡಿ ಕೈಗೊಳ್ಳಲು ಅವಕಾಶವಿದೆ. ಪ್ರಸ್ತುತ ಪ್ರತಿದಿನ 3 ಲಕ್ಷ ಮಾನವ ದಿನಗಳ ಉದ್ಯೋಗ ಸೃಷ್ಟಿಯಾಗುತ್ತಿದ್ದು, ಈ ತಿಂಗಳಾಂತ್ಯದೊಳಗೆ 5ರಿಂದ 6 ಲಕ್ಷ ಮಾನವ ದಿನಗಳ ಉದ್ಯೋಗ ಸೃಷ್ಟಿಸುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

ಗ್ರಾಮಗಳ ಸ್ವಚ್ಛತೆ ಹಾಗೂ ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸಮುದಾಯ ಆರೋಗ್ಯ ಕಾಪಾಡುವಲ್ಲಿ ಸ್ವಚ್ಛತೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಿವು ಕೇಂದ್ರಗಳು ಹಾಗೂ ಗ್ರಂಥಾಲಯಗಳು ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಪರಿಣಾಮಕಾರಿಯಾಗಿ ಬಳಕೆಯಾಗುವಂತೆ ನೋಡಿಕೊಳ್ಳಬೇಕು ಎಂದರು.

ಪಂಚಾಯಿತಿ ಸಿಬ್ಬಂದಿ ತಾಂತ್ರಿಕ ಜ್ಞಾನ ಹೆಚ್ಚಿಸಿಕೊಂಡು ಸಕಾಲದಲ್ಲಿ ಇ–ಸ್ವತ್ತು ವಿತರಿಸಲು ಕ್ರಮ ಕೈಗೊಳ್ಳಬೇಕು. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಕೆರೆ, ಕುಂಟೆ ಸೇರಿದಂತೆ ಸರ್ಕಾರಿ ಆಸ್ತಿಗಳನ್ನು ಸಂರಕ್ಷಿಸುವ ಜವಾಬ್ದಾರಿಯನ್ನೂ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಸಚಿವರು ಹೇಳಿದರು.

'ನಮ್ಮ ಹೊಲ, ನಮ್ಮ ದಾರಿ' ಯೋಜನೆಯನ್ನು ಜಾರಿಗೊಳಿಸುವುದು ತಮ್ಮ ಗುರಿಯಾಗಿದ್ದು, ಈ ಕುರಿತು ಸೂಕ್ತ ಯೋಜನೆ ರೂಪಿಸಲಾಗುವುದು. ಶಿಕ್ಷಣ, ಸಮುದಾಯ ಆರೋಗ್ಯ ಹಾಗೂ ಗ್ರಾಮೀಣ ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಆದ್ಯತೆ ನೀಡಬೇಕು ಎಂದು ಖಂಡ್ರೆ ತಿಳಿಸಿದರು.

## ಬೆಂಗಳೂರು ಜಲಮಂಡಳಿ: ನೇರ ಫೋನ್ ಇನ್ ಕಾರ್ಯಕ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಜಲಮಂಡಳಿಯ ವತಿಯಿಂದ ಜಲಮಂಡಳಿ ಅಧ್ಯಕ್ಷರಾದ ಡಾ.ಮಂಜುಳ ಎನ್ ಭಾ.ಆ.ಸೇ., ರವರ ಅಧ್ಯಕ್ಷತೆಯಲ್ಲಿ ಆಗಸ್ಟ್ 28 ರಂದು ಶುಕ್ರವಾರ ಬೆಳಿಗ್ಗೆ 09:30 ರಿಂದ 10:30 ರವರೆಗೆ ನೇರ ಫೋನ್–ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ.

ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು–ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು.

ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; 080–22945119 ಮತ್ತು 080–22229639.

ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್. ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ.

ಸಾರ್ವಜನಿಕರು ಈ ನೇರ ಫೋನ್–ಇನ್ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ಪ್ರಕಟಣೆಯಲ್ಲಿ ಕೋರಿದೆ.

## ನಿಮ್ಮ ಜೊತೆ ನಾವಿದ್ದೇವೆ. ಧೈರ್ಯವಾಗಿರಿ: ನೇಪಾಳದಲ್ಲಿ ಸಿಲುಕಿರುವ ಕನ್ನಡಿಗರಿಗೆ ಶಿವಕುಮಾರ್ ಅಭಯ

● ವಿಕ್ರಮ ವಾಹಿನಿ । ದೆಹಲಿ

"ಧೈರ್ಯವಾಗಿರಿ. ಸುರಕ್ಷಿತ ಸ್ಥಳದಲ್ಲಿ ಇರುವುದರಿಂದ ಹೊರ ಬರುವ ಪ್ರಯತ್ನ ಮಾಡುವುದು ಬೇಡ. ನಿಮ್ಮ ಜೊತೆ ನಮ್ಮ ಸರ್ಕಾರವಿದೆ. ನಿಮ್ಮ ಸಂಕಷ್ಟಕ್ಕೆ ನಾವು ಸ್ಪಂದಿಸುತ್ತೇವೆ' ಎಂದು ಸಿಎಂ ಡಿ ಕೆ ಶಿವಕುಮಾರ್ ನೇಪಾಳ ದುರಂತದಲ್ಲಿ ಬದುಕುಳಿದ ಕನ್ನಡಿಗ ಮಲ್ಲಿನಾಥ್ ಅವರಿಗೆ ಧೈರ್ಯ ತುಂಬಿದರು.

ನವದೆಹಲಿಯ ಪ್ರವಾಸದಲ್ಲಿರುವ ಸಿಎಂ ಅವರು, ಗುರುವಾರ ಅಲ್ಲಿಂದಲೇ ವೀಡಿಯೋ ಕರೆ ಮಾಡಿ ಮಾತನಾಡಿ, ಸಂಕಷ್ಟದಲ್ಲಿರುವ ಕನ್ನಡಿಗರ ಆತ್ಮಸ್ಥೈರ್ಯ ಹೆಚ್ಚಿಸಿದರು.

"ಕರ್ನಾಟಕದಿಂದ ನೇಪಾಳ ಪ್ರವಾಸಕ್ಕೆ ಹೊರಟವರ ಸಂಪರ್ಕ ಕಡಿತವಾಗಿದೆ. ಹುಡುಕಾಟದ ಪ್ರಕ್ರಿಯೆ ನಡೆಯುತ್ತಿದೆ. ಆದರೆ, ಯಾರೂ ಕೂಡ ಎದೆಗುಂದುವ ಅಗತ್ಯವಿಲ್ಲ. ನಾವೆಲ್ಲ ಕನ್ನಡಿಗರು. ನಮ್ಮ ಸರ್ಕಾರ ನಿಮ್ಮ ಜೊತೆಯಲ್ಲಿರುತ್ತದೆ' ಎಂದು ಹೇಳಿದರು.

## ರಣವೀರ್‌ಗೆ ಶಕ್ತಿಮಾನ್ ಪಾತ್ರ ನಿರಾಕರಿಸಿದ್ದು ತಪ್ಪು: ಮುಕೇಶ್ ಖನ್ನಾ

● ವಿಕ್ರಮ ವಾಹಿನಿ । ಮುಂಬೈ

ಬಾಲಿವುಡ್ ನಟ ರಣವೀರ್ ಸಿಂಗ್ ಅವರಿಗೆ 'ಶಕ್ತಿಮಾನ್' ಪಾತ್ರ ನೀಡಲು ನಿರಾಕರಿಸಿದ ನಿರ್ಧಾರದಿಂದ ಕೋಟ್ಯಂತರ ರೂಪಾಯಿ ಕಳೆದುಕೊಂಡಿದ್ದೇನೆ ಎಂದು ಮೂಲ 'ಶಕ್ತಿಮಾನ್' ಖ್ಯಾತಿಯ ನಟ ಮುಕೇಶ್ ಖನ್ನಾ ಹೇಳಿದ್ದಾರೆ. ವ್ಯವಹಾರದ ದೃಷ್ಟಿಯಿಂದ ತಮ್ಮ ನಿರ್ಧಾರ ಮೂರ್ಖತನದಂತೆ ಕಂಡರೂ, ಪಾತ್ರದ ಮೌಲ್ಯ ಮತ್ತು ಶಕ್ತಿಮಾನ್ ಪರಂಪರೆಯನ್ನು ಕಾಪಾಡುವುದು ಹಣಕ್ಕಿಂತ ಮುಖ್ಯ ಎಂದು ಅವರು ತಿಳಿಸಿದ್ದಾರೆ.

ಇತ್ತೀಚೆಗೆ ಸುಭೋಜಿತ್ ಘೋಷ್ ಅವರ ಪಾಡ್‌ಕಾಸ್ಟ್‌ನಲ್ಲಿ ಮಾತನಾಡಿದ ಮುಕೇಶ್ ಖನ್ನಾ, ರಣವೀರ್ ಸಿಂಗ್ ಅತ್ಯುತ್ತಮ ನಟ. ಆದರೆ 'ಶಕ್ತಿಮಾನ್' ಪಾತ್ರಕ್ಕೆ ಅವರ ಮುಖಭಾವ ಮತ್ತು ವ್ಯಕ್ತಿತ್ವ ಸೂಕ್ತವಲ್ಲ ಎಂಬ ಕಾರಣಕ್ಕೆ ತಾವು ಒಪ್ಪಿಗೆ ನೀಡಲಿಲ್ಲ ಎಂದು ವಿವರಿಸಿದ್ದಾರೆ.

ರಣವೀರ್ ಸಿಂಗ್ ಅವರು 'ಶಕ್ತಿಮಾನ್' ಪಾತ್ರ ಮಾಡುವ ಆಸಕ್ತಿ ಹೊಂದಿದ್ದರು. ಈ ಕುರಿತು ತಮ್ಮೊಂದಿಗೆ ಸುಮಾರು ಮೂರು ಗಂಟೆಗಳ ಕಾಲ ಚರ್ಚಿಸಿದ್ದರು. ಅವರ ಉತ್ಸಾಹ ಮತ್ತು ನಟನಾ ಸಾಮರ್ಥ್ಯವನ್ನು ಮೆಚ್ಚಿಕೊಂಡಿದ್ದರೂ, ಪಾತ್ರದ ಇಮೇಜ್‌ಗೆ ಅವರು ಹೊಂದಿಕೆಯಾಗುವುದಿಲ್ಲ ಎಂಬ ಕಾರಣಕ್ಕೆ ಪ್ರಸ್ತಾಪವನ್ನು ತಿರಸ್ಕರಿಸಿದ್ದಾಗಿ ಖನ್ನಾ ಹೇಳಿದ್ದಾರೆ.

ತಮ್ಮ ನಿರ್ಧಾರದಿಂದ ಲಕ್ಷಗಳಲ್ಲ, ಕೋಟ್ಯಂತರ ರೂಪಾಯಿ ಮೌಲ್ಯದ ಚೆಕ್ ಕೈತಪ್ಪಿದೆ ಎಂದು ಒಪ್ಪಿಕೊಂಡ ಅವರು, ಹಣಕ್ಕಿಂತ ಶಕ್ತಿಮಾನ್ ಪಾತ್ರದ ಮೌಲ್ಯ ಮತ್ತು ಅದರ ಪರಂಪರೆ ಮುಖ್ಯವಾಗಿದೆ ಎಂದಿದ್ದಾರೆ. ಶಕ್ತಿಮಾನ್ ಪಾತ್ರವನ್ನು ತಮ್ಮಿಷ್ಟದಂತೆ ಬದಲಿಸಿ ಅದರ ಮೂಲ ಸ್ವರೂಪಕ್ಕೆ ಧಕ್ಕೆ ತರುವುದನ್ನು ತಾವು ಒಪ್ಪುವುದಿಲ್ಲ. ಈ ಪರಂಪರೆಯನ್ನು ಉಳಿಸುವುದು ತಮ್ಮ ಜವಾಬ್ದಾರಿ ಎಂದು ಮುಕೇಶ್ ಖನ್ನಾ ಸ್ಪಷ್ಟಪಡಿಸಿದ್ದಾರೆ.

## ಆಟೋ, ಟ್ಯಾಕ್ಸಿ ಚಾಲಕರಿಗೆ ಮರಾಠಿ ಕಲಿಯಲು 1 ವರ್ಷ

● ವಿಕ್ರಮ ವಾಹಿನಿ । ಮುಂಬೈ

ಮಹಾರಾಷ್ಟ್ರದಲ್ಲಿ ಆಟೋ ರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಮರಾಠಿ ಭಾಷೆ ಕಲಿಯಲು ಸರ್ಕಾರ ಒಂದು ವರ್ಷದ ಕಾಲಾವಕಾಶ ನೀಡಿದೆ ಎಂದು ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ತಿಳಿಸಿದ್ದಾರೆ. ಈ ಅವಧಿಯಲ್ಲಿ ಭಾಷೆ ಕಲಿಯಲು ವಿಫಲರಾದ ಚಾಲಕರ ವಿರುದ್ಧ ಯಾವುದೇ ಆಡಳಿತಾತ್ಮಕ ಕ್ರಮ ಕೈಗೊಳ್ಳುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಆಟೋ ಮತ್ತು ಟ್ಯಾಕ್ಸಿ ಚಾಲಕರ ನಿಯೋಗ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮರಾಠಿ ಕಲಿಯಲು ಸಮಯಾವಕಾಶ ನೀಡುವಂತೆ ಮನವಿ ಮಾಡಿತ್ತು. ವಿವಿಧ ವಯೋಮಾನದವರು ಈ ವೃತ್ತಿಯಲ್ಲಿರುವುದರಿಂದ ತಕ್ಷಣ ಭಾಷೆ ಕಲಿಯುವುದು ಕಷ್ಟವಾಗಲಿದೆ. ಹೀಗಾಗಿ ಒಂದು ವರ್ಷದ ಕಾಲಾವಕಾಶ ನೀಡುವಂತೆ ಅವರು ಮನವಿ ಮಾಡಿದ್ದರು. ಸರ್ಕಾರ ಅವರ ಬೇಡಿಕೆಯನ್ನು ಒಪ್ಪಿಕೊಂಡಿದೆ ಎಂದು ಫಡ್ನವೀಸ್ ಹೇಳಿದರು.

ಪ್ರತಿಯೊಬ್ಬ ಚಾಲಕರೂ ಮರಾಠಿ ಭಾಷೆಯ ಕನಿಷ್ಠ ಜ್ಞಾನ ಹೊಂದಿರಬೇಕು ಎಂಬುದನ್ನು ಚಾಲಕರೂ ಒಪ್ಪಿಕೊಂಡಿದ್ದಾರೆ. ಒಂದು ವರ್ಷದೊಳಗೆ ಮರಾಠಿ ಕಲಿತುಕೊಳ್ಳುವಂತೆ ಅವರು ಮನವಿ ಮಾಡಿದರು.

ಇದಕ್ಕೂ ಮುನ್ನ ಮರಾಠಿ ತಿಳಿಯದ ಚಾಲಕರ ಬ್ಯಾಡ್ಜ್‌ಗಳನ್ನು ಅಮಾನತುಗೊಳಿಸುವ ಅಥವಾ ರದ್ದುಗೊಳಿಸುವ ಕುರಿತು ಸಾರಿಗೆ ಇಲಾಖೆ ನಿಯಮ ಜಾರಿಗೆ ತಂದಿತ್ತು. ಮೊದಲ ಹಂತದಲ್ಲಿ ಒಂದು ತಿಂಗಳು, ಬಳಿಕ ಮೂರು ತಿಂಗಳ ಹೆಚ್ಚುವರಿ ಅವಕಾಶ ನೀಡಲಾಗುವುದು ಎಂದು ಸಾರಿಗೆ ಸಚಿವ ಪ್ರತಾಪ್ ಸರ್ನಾಯಕ್ ತಿಳಿಸಿದ್ದರು.

ಈ ನಿಯಮವನ್ನು ಪ್ರಶ್ನಿಸಿ ನಾಲ್ವರು ಟ್ಯಾಕ್ಸಿ ಚಾಲಕರು ಬಾಂಬೆ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದಾರೆ. ಸರ್ಕಾರಿ ಅಧಿಸೂಚನೆಯಿಂದ ಬಡ ಹಾಗೂ ವಲಸೆ ಚಾಲಕರ ಜೀವನೋಪಾಯಕ್ಕೆ ತೊಂದರೆಯಾಗಲಿದೆ ಎಂದು ಅರ್ಜಿದಾರರು ವಾದಿಸಿದ್ದಾರೆ.

ಚಾಲಕರು ಪ್ರಯಾಣಿಕರೊಂದಿಗೆ ಸುಗಮವಾಗಿ ಸಂವಹನ ನಡೆಸಲು ಹಾಗೂ ರಾಜ್ಯದ ಭಾಷೆಯ ಕನಿಷ್ಠ ಜ್ಞಾನ ಹೊಂದಿರಬೇಕು ಎಂಬ ಉದ್ದೇಶದಿಂದ ಈ ನಿಯಮ ಜಾರಿಗೆ ತರಲಾಗಿದೆ. ಆದರೆ, ನಿಯಮವನ್ನು ಜಾರಿಗೊಳಿಸುವಾಗ ಚಾಲಕರಿಗೆ ಅಗತ್ಯ ತರಬೇತಿ ಮತ್ತು ಭಾಷೆ ಕಲಿಯಲು ಸೂಕ್ತ ಅವಕಾಶ ಕಲ್ಪಿಸುವಂತೆ ಸರ್ಕಾರಕ್ಕೆ ಮನವಿಗಳು ಬಂದಿವೆ.



**ಶ್ರೀ ಹರಿಹರ ರಾಜ ಕ್ಷತ್ರಿಯ ಸಂಘದಿಂದ ಸಾಮೂಹಿಕ "ಯಜುರು ಉಪಾಕರ್ಮ" ಮಲ್ಲೇಶ್ವರದ ಈಸ್ಟ್ ಪಾರ್ಕ್ ರಸ್ತೆಯಲ್ಲಿರುವ ಶ್ರೀ ರಾಮ ಮಂದಿರದಲ್ಲಿ ಶ್ರೀ ಹರಿಹರ ರಾಜ ಕ್ಷತ್ರಿಯ ಸಂಘ (ರಿ) ದ ವತಿಯಿಂದ ಸಾಮೂಹಿಕ "ಯಜುರು ಉಪಾಕರ್ಮ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಪ್ರಪ್ರಥಮ ಬಾರಿಗೆ ಈ ಭಾಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ, ನಗರದ ನಾನಾ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಬಂದ ಕುಲಬಾಂಧವರು ಈ ವಿಶೇಷ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ್ದಾರೆ, ಮುಂದಿನ ದಿನಗಳಲ್ಲಿ ಎಲ್ಲರ ಸಹಕಾರದಿಂದ ಸಮಾಜದ ಬಂಧುಗಳಿಗಾಗಿ ಧಾರ್ಮಿಕ ಹಾಗೂ ಸಮಾಜದ ಅಭಿವೃದ್ಧಿಪರ ಕಾರ್ಯಚಟುವಟಿಕೆಯ ಯೋಜನೆಗಳನ್ನು ಮಾಡುವ ಸಂಕಲ್ಪವಿದೆ ಎಂದು ಸಂಘದ ಅಧ್ಯಕ್ಷ ಪ್ರಕಾಶ್ ರಾಜು ತಿಳಿಸಿದರು. ಈ ಸಂದರ್ಭದಲ್ಲಿ ಪದ್ಮನಾಭರಾಜು, ನಾಗರಾಜ್ ಜಿ., ನಾಣಿ ರಾಜು, ಪದ್ಮನಾಭನ್ ರಾಜು, ಗಿರಿರಾಜು ಎನ್.,. ಪ್ರಸನ್ನ ರಾಜು ಕೆ., ಕೇಶವರಾಜು ಹಾಗೂ ಇತರರು ಉಪಸ್ಥಿತರಿದ್ದರು.**

## ಹಬ್ಬದ ಋತುವಿನಲ್ಲಿ 41 ಅಗತ್ಯ ವಸ್ತುಗಳ ಬೆಲೆ ಸ್ಥಿರತೆಗೆ ಕೇಂದ್ರ ಕ್ರಮ

● ವಿಕ್ರಮ ವಾಹಿನಿ । ನವದೆಹಲಿ

ಹಬ್ಬಗಳ ಋತುವಿನಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ನಿಯಂತ್ರಿಸಿ ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ವಸ್ತುಗಳು ಲಭ್ಯವಾಗುವಂತೆ ಕೇಂದ್ರ ಸರ್ಕಾರ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ. ಈರುಳ್ಳಿ, ಬೇಳೆಕಾಳು, ತರಕಾರಿ ಸೇರಿದಂತೆ 41 ಅಗತ್ಯ ವಸ್ತುಗಳ ಬೆಲೆ, ಬೇಡಿಕೆ ಮತ್ತು ಪೂರೈಕೆ ಮೇಲೆ ದೇಶಾದ್ಯಂತ ನಿರಂತರ ನಿಗಾ ವಹಿಸಲಾಗುತ್ತಿದೆ.

ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರ ನಿರ್ದೇಶನದಂತೆ 579 ಕೇಂದ್ರಗಳಲ್ಲಿ ದೈನಂದಿನ ಬೆಲೆ ಹಾಗೂ ಮಾರುಕಟ್ಟೆ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಈರುಳ್ಳಿ ಬೆಲೆ ಏರಿಕೆ ತಡೆಯಲು ನಾಸಿಕ್‌ನಿಂದ ಪ್ರಮುಖ ನಗರಗಳಿಗೆ ಬಫರ್ ಸ್ಟಾಕ್‌ನ ಈರುಳ್ಳಿ ಪೂರೈಸಲಾಗುತ್ತಿದೆ. ದೆಹಲಿಯಲ್ಲಿ ಕೆ.ಜಿ.ಗೆ ರೂ 35ರ ದರದಲ್ಲಿ ಈರುಳ್ಳಿ ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಎನ್‌ಸಿಸಿಎಫ್, ನಾಫೆಡ್, ಸಫಲ್, ಕೇಂದ್ರೀಯ ಭಂಡಾರ್ ಮಳಿಗೆಗಳು ಹಾಗೂ ಮೊಬೈಲ್ ವಾಹನಗಳ ಮೂಲಕ ಗ್ರಾಹಕರಿಗೆ ತಲುಪಿಸಲಾಗುತ್ತಿದೆ. ಒಟ್ಟು 122 ಮಳಿಗೆಗಳು ಮತ್ತು 90 ಮೊಬೈಲ್ ವ್ಯಾನ್‌ಗಳಲ್ಲಿ ಚಿಲ್ಲರೆ ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದೆ.

2026–27ನೇ ಸಾಲಿನಲ್ಲಿ ಬೆಲೆ ಸ್ಥಿರೀಕರಣ ನಿಧಿಯ ಬಫರ್‌ಗಾಗಿ 2 ಲಕ್ಷ ಟನ್ ರಬಿ ಈರುಳ್ಳಿ ಖರೀದಿಸುವ ಗುರಿ ಹೊಂದಲಾಗಿದೆ. ಈಗಾಗಲೇ ಸುಮಾರು 1.21 ಲಕ್ಷ ಟನ್ ಈರುಳ್ಳಿ ಖರೀದಿಸಲಾಗಿದೆ. ನಾಸಿಕ್‌ನಿಂದ ನವದೆಹಲಿಗೆ 'ಕಾಂದಾ ಎಕ್ಸ್‌ಪ್ರೆಸ್' ಮೂಲಕ ಹಾಗೂ ಹಲವು ನಗರಗಳಿಗೆ ರಸ್ತೆ ಮಾರ್ಗದ ಮೂಲಕ ಈರುಳ್ಳಿ ಸಾಗಿಸಲಾಗುತ್ತಿದೆ.

ಓಣಂ, ಗಣೇಶ ಚತುರ್ಥಿ, ದಸರಾ, ದೀಪಾವಳಿ ಸೇರಿದಂತೆ ಹಬ್ಬಗಳು ಹಾಗೂ ವಿವಾಹ ಋತುವಿನಲ್ಲಿ ಬೇಡಿಕೆ ಹೆಚ್ಚಾಗುವ ಹಿನ್ನೆಲೆಯಲ್ಲಿ ಮಾರುಕಟ್ಟೆ ಪರಿಸ್ಥಿತಿಯನ್ನು ಕೇಂದ್ರ ಸರ್ಕಾರ ಸೂಕ್ಷ್ಮವಾಗಿ ಗಮನಿಸುತ್ತಿದೆ. ಅಗತ್ಯವಿದ್ದಲ್ಲಿ ಬಫರ್ ಸ್ಟಾಕ್‌ನಿಂದ ಹೆಚ್ಚುವರಿ ಪೂರೈಕೆ ಮಾಡುವ ಮೂಲಕ ಬೆಲೆ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವಾಲಯ ತಿಳಿಸಿದೆ.

ಪ್ರಸ್ತುತ ಅಖಿಲ ಭಾರತ ಸರಾಸರಿ ಚಿಲ್ಲರೆ ದರದಂತೆ ಟೊಮೆಟೊ ಕೆ.ಜಿ.ಗೆ ರೂ 38.33, ಆಲೂಗಡ್ಡೆ ರೂ 22.63, ಕಡಲೆಬೇಳೆ ರೂ 86.71, ತೊಗರಿಬೇಳೆ ರೂ 123.30, ಈರುಳ್ಳಿ ರೂ 37.87 ಹಾಗೂ ಹಾಲು ಲೀಟರ್‌ಗೆ ರೂ 60.82ರಷ್ಟಿದೆ. ಗ್ರಾಹಕರ ಹಿತಾಸಕ್ತಿ ರಕ್ಷಿಸಲು ಬೆಲೆ ಸ್ಥಿರತೆಗೆ ಸರ್ಕಾರ ಬದ್ಧವಾಗಿದೆ ಎಂದು ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

## ನೇಪಾಳ ದುರಂತ: ನಾಪತ್ತೆಯಾದ ಕನ್ನಡಿಗರ ಮಾಹಿತಿ ನೀಡಲು ಸರ್ಕಾರ ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

ನೇಪಾಳದಲ್ಲಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ದಿಢೀರ್ ಪ್ರವಾಹ (ಫ್ಲ್ಯಾಶ್ ಫ್ಲಡ್ಸ್) ದುರಂತಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಮೂಲದ ಪ್ರವಾಸಿಗರು ಅಥವಾ ನಾಗರಿಕರು ಯಾರಾದರೂ ನಾಪತ್ತೆಯಾಗಿದ್ದರೆ ಅಥವಾ ಸಂಪರ್ಕಕ್ಕೆ ಸಿಗದೇ ಇದ್ದಲ್ಲಿ, ತಕ್ಷಣವೇ ಅವರ ವಿವರಗಳನ್ನು ಒದಗಿಸುವಂತೆ ರಾಜ್ಯ ಸರ್ಕಾರವು ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಕೇಂದ್ರ ಗೃಹ ಸಚಿವಾಲಯ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯದೊಂದಿಗೆ ರಾಜ್ಯ ಸರ್ಕಾರವು ಸತತ ಸಂಪರ್ಕದಲ್ಲಿದ್ದು, ಸಂತ್ರಸ್ತ ಕುಟುಂಬಗಳಿಗೆ ಅಗತ್ಯ ನೆರವು ನೀಡಲು ಮತ್ತು ನಾಪತ್ತೆಯಾದವರನ್ನು ಪತ್ತೆಹಚ್ಚಲು ಸಮರಪಾದಾದಿಯಲ್ಲಿ ಕ್ರಮ ಕೈಗೊಳ್ಳುತ್ತಿದೆ.

ನೇಪಾಳದಲ್ಲಿ ನಿಮ್ಮ ಕುಟುಂಬಸ್ಥರು, ಸ್ನೇಹಿತರು ಅಥವಾ ಪರಿಚಿತರು ನಾಪತ್ತೆಯಾಗಿದ್ದಾರೆಂದು ಶಂಕಿಸಲಾಗಿದ್ದರೆ, ಸಾರ್ವಜನಿಕರು ನಾಪತ್ತೆಯಾದ ವ್ಯಕ್ತಿಯ ಪೂರ್ಣ ಹೆಸರು, ಮೊಬೈಲ್ ಸಂಖ್ಯೆ, ಕೊನೆಯದಾಗಿ ಸಂಪರ್ಕಿಸಿದ ಸ್ಥಳ ಮತ್ತು ಸಮಯ ಹಾಗೂ ಖಾಯಂ ವಿಳಾಸದ ವಿವರಗಳನ್ನು ಸರ್ಕಾರಕ್ಕೆ ತಕ್ಷಣವೇ ಒದಗಿಸಲು ಕೋರಲಾಗಿದೆ.

ಈ ವಿವರಗಳನ್ನು ನಮೂದಿಸಲು ರಾಜ್ಯ ಸರ್ಕಾರವು ವಿಶೇಷ ಗೂಗಲ್ ಫಾರ್ಮ್ (docs.google.com/forms/d/1gnw8B ) ಲಿಂಕ್ ಅನ್ನು ಸಹ ಒದಗಿಸಿದೆ.

ಸಂತ್ರಸ್ತರು ಮತ್ತು ಅವರ ಕುಟುಂಬಸ್ಥರ ನೆರವಿಗಾಗಿ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ (SEOC) 24x7 ಸಹಾಯವಾಣಿ ತೆರೆದಿದ್ದು, ಸಾರ್ವಜನಿಕರು 1070 (ಟೋಲ್ ಫ್ರೀ) ಅಥವಾ 080–22253707 ಸಂಖ್ಯೆಗೆ ಕರೆ ಮಾಡಬಹುದು. ಇಮೇಲ್ ಮೂಲಕ ಮಾಹಿತಿ ನೀಡಲು , eockarnataka@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಅಲ್ಲದೆ, ನೇಪಾಳದಲ್ಲಿ ಸಿಲುಕಿರುವ ಭಾರತೀಯರಿಗೆ ತುರ್ತು ನೆರವು ನೀಡಲು ಅಲ್ಲಿನ ಭಾರತೀಯ ರಾಯಭಾರ ಕಚೇರಿಯು ತುರ್ತು ವಾಟ್ಸಾಪ್ ಹಾಗೂ ಕರೆ ಸಂಖ್ಯೆಗಳನ್ನು ಬಿಡುಗಡೆ ಮಾಡಿದೆ. ಸಾರ್ವಜನಿಕರು +977 9851316807, +977 9709107500 ಅಥವಾ +977 9810326117 ಸಂಖ್ಯೆಗಳನ್ನು ನೇರವಾಗಿ ಅಥವಾ ವಾಟ್ಸಾಪ್ ಮೂಲಕ ಸಂಪರ್ಕಿಸಿ ಮಾಹಿತಿ ಪಡೆಯಲು ಹಾಗೂ ನೆರವು ಕೋರಲು ಪ್ರಕಟಣೆಯಲ್ಲಿ ತಿಳಿಸಿದೆ. ನೇಪಾಳದಲ್ಲಿರುವ ಕನ್ನಡಿಗರ ಸುರಕ್ಷತೆ ಹಾಗೂ ನಾಪತ್ತೆಯಾದವರ ಪತ್ತೆಗೆ ರಾಜ್ಯ ಸರ್ಕಾರದ ಅಧಿಕಾರಿಗಳು ನಿರಂತರವಾಗಿ ಕೇಂದ್ರ ಸರ್ಕಾರ ಮತ್ತು ಭಾರತೀಯ ರಾಯಭಾರ ಕಚೇರಿಯೊಂದಿಗೆ ಸಮನ್ವಯ ಸಾಧಿಸುತ್ತಿದ್ದಾರೆ.

## ಕ್ರೀಡೆ ರಾಷ್ಟ್ರ ನಿರ್ಮಾಣದ ಪ್ರಮುಖ ಸಾಧನೆ: ಸಚಿವ ಸೋಮಣ್ಣ

● ವಿಕ್ರಮ ವಾಹಿನಿ । ಬೆಂಗಳೂರು

ಕ್ರೀಡೆ ಕೇವಲ ಪದಕ ಗೆಲ್ಲುವ ಸ್ಪರ್ಧೆಯಲ್ಲ; ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ವೃದ್ಧಿಯೊಂದಿಗೆ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವ ಪ್ರಮುಖ ಸಾಧನವಾಗಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.

ನಗರದ ರಾಮಯ್ಯ ಕಾನೂನು ಕಾಲೇಜಿನಲ್ಲಿ ಆಯೋಜಿಸಿದ್ದ 'ಖೇಲೋ ಇಂಡಿಯಾ ಡೈಲಾಗ್–ಖೇಲ್ ಕೀ ಬಾತ್, ಪಿಎಂ ಮೋದಿ ಕೇ ಸಾಥ್' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗಳಾಗಿವೆ. ಖೇಲೋ ಇಂಡಿಯಾ ಮಿಷನ್ ಹಾಗೂ 'ಮೇರಾ ಯುವ ಭಾರತ್' ಉಪಕ್ರಮಗಳು ವಿಕಸಿತ ಭಾರತ–2047 ನಿರ್ಮಾಣಕ್ಕೆ ಬಲವಾದ ಅಡಿಪಾಯವಾಗಲಿವೆ ಎಂದು ಹೇಳಿದರು.

ದೇಶದಲ್ಲಿ ಖೇಲೋ ಇಂಡಿಯಾ ಕೇಂದ್ರಗಳ ಸ್ಥಾಪನೆಗೆ ಆದ್ಯತೆ ನೀಡಲಾಗಿದ್ದು, ಯುವ



ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಸೂಕ್ತ ತರಬೇತಿ ಮತ್ತು ಅವಕಾಶ ಕಲ್ಪಿಸುವ ಕಾರ್ಯ ನಡೆಯುತ್ತಿದೆ. ಕ್ರೀಡಾ ಉಪಕರಣಗಳ ದೇಶೀಯ ಉತ್ಪಾದನೆಗೂ ಸರ್ಕಾರ ಉತ್ತೇಜನ ನೀಡುತ್ತಿದೆ ಎಂದರು.

ಟೋಕಿಯೊ ಮತ್ತು ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತೀಯ ಕ್ರೀಡಾಪಟುಗಳು ಸಾಧಿಸಿದ ಯಶಸ್ಸು ದೇಶದ ಕ್ರೀಡಾ ಸಾಮರ್ಥ್ಯವನ್ನು ಜಗತ್ತಿಗೆ ಪರಿಚಯಿಸಿದೆ. 2023ರ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತ 107 ಪದಕಗಳನ್ನು ಗೆದ್ದು ಹೊಸ ದಾಖಲೆ ನಿರ್ಮಿಸಿರುವುದನ್ನು ಅವರು ಸ್ಮರಿಸಿದರು.

### ರೈಲ್ವೆಯಿಂದ ಕ್ರೀಡಾಪಟುಗಳಿಗೆ ಪ್ರೋತ್ಸಾಹ

ಭಾರತೀಯ ರೈಲ್ವೆ ದಶಕಗಳಿಂದ ದೇಶದ ಕ್ರೀಡಾ ಕ್ಷೇತ್ರಕ್ಕೆ ಬಲವಾದ ಬೆಂಬಲ ನೀಡುತ್ತಿದೆ. ಪ್ರಸ್ತುತ ರೈಲ್ವೆಯ 29 ಕ್ರೀಡಾ ವಿಭಾಗಗಳಲ್ಲಿ 9,000ಕ್ಕೂ ಹೆಚ್ಚು ಕ್ರೀಡಾಪಟುಗಳು ಸೇವೆ ಸಲ್ಲಿಸುತ್ತಿದ್ದು, ಅವರಿಗೆ ತರಬೇತಿ, ಉದ್ಯೋಗಾವಕಾಶ ಹಾಗೂ ವೃತ್ತಿಜೀವನದ ಭದ್ರತೆ ಒದಗಿಸಲಾಗುತ್ತಿದೆ ಎಂದು ಸೋಮಣ್ಣ ತಿಳಿಸಿದರು.

2036ರ ಒಲಿಂಪಿಕ್ಸ್ ಆತಿಥ್ಯದ ಮಹತ್ವಾಕಾಂಕ್ಷೆಯನ್ನು ಗಮನದಲ್ಲಿಟ್ಟುಕೊಂಡು ಚಿಕ್ಕ ವಯಸ್ಸಿನಲ್ಲಿಯೇ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಆಧುನಿಕ ತರಬೇತಿ ನೀಡುವ ಅಗತ್ಯವಿದೆ ಎಂದರು. ವಿಶ್ವವಿದ್ಯಾಲಯಗಳು ಶಿಕ್ಷಣದ ಜೊತೆಗೆ ಕ್ರೀಡಾ ಪ್ರತಿಭೆಗಳನ್ನು ಬೆಳೆಸುವ ಕೇಂದ್ರಗಳಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಖ್ಯಾತ ಕ್ರೀಡಾಪಟುಗಳಾದ ತೃಪ್ತಿ ಮುರಗುಂಡೆ ಮತ್ತು ರಕ್ಷಿತಾ ರಾಜು ತಮ್ಮ ಕ್ರೀಡಾ ಜೀವನದ ಅನುಭವಗಳನ್ನು ಹಂಚಿಕೊಂಡರು. ದೃಢನಿಶ್ಚಯ, ನಿರಂತರ ಪರಿಶ್ರಮ ಹಾಗೂ ಅಚಲ ಮನೋಭಾವದಿಂದ ಯಾವುದೇ ಅಡೆತಡೆಗಳನ್ನು ಮೀರಿ ಸಾಧನೆ ಮಾಡಲು ಸಾಧ್ಯ ಎಂದು ಅವರು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು.

ಮೈ ಭಾರತ್ ನಿರ್ದೇಶಕ ಅಶೋಕ್ ಕುಮಾರ್ ದಾಸ್ ಸೇರಿದಂತೆ ಕಾಲೇಜಿನ ಆಡಳಿತ ಮಂಡಳಿ ಸದಸ್ಯರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ



ಕಾರ್ಮಿಕ ಮತ್ತು ಉದ್ಯೋಗ ಇಲಾಖೆಯ ಸಚಿವರಾದ ಸಂತೋಷ್ ಲಾಡ್ ರವರ ಅಧ್ಯಕ್ಷತೆಯಲ್ಲಿ ಇಂದು ವಿಕಾಸ ಸೌಧದಲ್ಲಿ ಆಯೋಜಿಸಲಾಗಿದ್ದ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ಜರುಗಿತು. ಸಭೆಯಲ್ಲಿ ಕಾರ್ಮಿಕ ಇಲಾಖೆಯ ಕಾರ್ಯದರ್ಶಿಗಳಾದ ಸಲ್ಮಾ ಫಹಿಂ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರವಿ ಚೆನ್ನಣ್ಣನವರ್, ಕಾರ್ಮಿಕ ಆಯುಕ್ತರಾದ ರಾಘಪ್ರಿಯ, ಇಎಸ್ಐ ಆಯುಕ್ತರಾದ ದಿನೇಶ್ ಕುಮಾರ್, ಅಪರ ಕಾರ್ಮಿಕ ಆಯುಕ್ತರಾದ ಡಾ.ಮಂಜುನಾಥ್, ಜಂಟಿ ಕಾರ್ಮಿಕ ಆಯುಕ್ತರಾದ ರವಿಕುಮಾರ್, ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿ ಗಳಾದ ಉಮೇಶ್, ಉಪ ಕಾರ್ಮಿಕ ಆಯುಕ್ತರಾದ ಗುರುಪ್ರಸಾದ್, ಕಾರ್ಮಿಕ ಕಲ್ಯಾಣ ಆಯುಕ್ತರಾದ ಆಂಜನೇಯ, ಕಾರ್ಖಾನೆಗಳು ಮತ್ತು ಬಾಯ್ಲರುಗಳ ಇಲಾಖೆಯ ನಿರ್ದೇಶಕರಾದ ನಂಜಪ್ಪ ಸೇರಿದಂತೆ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

## ನೇಪಾಳ ಪ್ರವಾಹ: ಕರ್ನಾಟಕದ 13 ಮಂದಿ ಸಿಲುಕಿರುವ ಮಾಹಿತಿ

● ವಿಕ್ರಮ ವಾಹಿನಿ । ಬೆಂಗಳೂರು

ನೇಪಾಳ–ಟಿಬೆಟ್ ಗಡಿ ಪ್ರದೇಶದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಕರ್ನಾಟಕದ 13 ಮಂದಿ ಸಿಲುಕಿರುವ ಮಾಹಿತಿ ಲಭ್ಯವಾಗಿದೆ. ಇವರಲ್ಲಿ ಬೆಂಗಳೂರಿನ 11, ಮೈಸೂರು ಮತ್ತು ಧಾರವಾಡದ ತಲಾ ಒಬ್ಬರು ಸೇರಿದ್ದಾರೆ.

ಬಹುತೇಕರು ನೇಪಾಳದ ರಸುವಾ ಜಿಲ್ಲೆಯ ತಿಮುರೆ ಪ್ರದೇಶದಲ್ಲಿದ್ದು, ಕೆಲವರು ಟಿಬೆಟ್‌ನ ದಾರ್ಚೆನ್‌ನಲ್ಲಿ ಸಿಲುಕಿದ್ದಾರೆ. ಅವರ ರಕ್ಷಣೆ ಹಾಗೂ ಸುರಕ್ಷಿತ ವಾಪಸಾತಿಗಾಗಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರ ಮತ್ತು ಭಾರತೀಯ ರಾಯಭಾರ ಕಚೇರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದೆ. ಸಿಲುಕಿರುವವರ ಸಂಬಂಧಿಕರು ಹಾಗೂ ಪ್ರವಾಸ ಸಂಘಟಕರು ಅಗತ್ಯ ಮಾಹಿತಿ ನೀಡುವಂತೆ ಮನವಿ ಮಾಡಲಾಗಿದೆ. ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರವು 24 ಗಂಟೆಯೂ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದು, ಅಗತ್ಯ ನೆರವು ಒದಗಿಸಲು ಕ್ರಮ ಕೈಗೊಳ್ಳುತ್ತಿದೆ.

## ಮೆರವಣಿಗೆ ವೇಳೆ ಘರ್ಷಣೆ: ಪುನೀತ್ ಹಳ್ಳಿಕೇರಿ ಸೇರಿ 8 ಮಂದಿ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಈದ್–ಮಿಲಾದ್ ಮೆರವಣಿಗೆ ವೇಳೆ ಬೆಂಗಳೂರಿನ ಬಸವನಗುಡಿಯ ಎನ್ ಆರ್ ರಸ್ತೆಯಲ್ಲಿ ಎರಡು ಗುಂಪುಗಳ ನಡುವೆ ಗಲಾಟೆ ನಡೆದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಮೂರು ಪ್ರತ್ಯೇಕ ಎಫ್ಐಆರ್‌ಗಳನ್ನು ದಾಖಲಿಸಲಾಗಿದೆ. ಒಂದು ಗುಂಪಿನ ಮುಖಂಡ ಪುನೀತ್ ಕೆರೆಹಳ್ಳಿ ಸೇರಿದಂತೆ ಒಟ್ಟು 8 ಮಂದಿಯನ್ನು ಪೊಲೀಸರು ಬಂಧಿಸಿ ತನಿಖೆ ಮುಂದುವರಿಸಿದ್ದಾರೆ.

ಬುಧವಾರ ಈದ್–ಮಿಲಾದ್/ಮಿಲಾದುನ್ನಬಿ ಮೆರವಣಿಗೆ ನಡೆಯುತ್ತಿದ್ದ ವೇಳೆ ರಾಷ್ಟ್ರ ರಕ್ಷಣಾ ಪಡೆ ಕಾರ್ಯಕರ್ತರು ಹಾಗೂ ಮತ್ತೊಂದು ಕೋಮಿನ ಯುವಕರ ನಡುವೆ ಗಲಾಟೆ ನಡೆದಿದೆ ಎನ್ನಲಾಗಿದೆ. ಈ ವೇಳೆ ರಾಷ್ಟ್ರ ರಕ್ಷಣಾ ಪಡೆ ಕಾರ್ಯಕರ್ತ ಮುರುಳಿ ಅವರ ತಲೆಗೆ ರಾಡ್‌ನಿಂದ ಹಲ್ಲೆ ನಡೆಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಘಟನೆಯ ಬಳಿಕ ಪುನೀತ್ ಕೆರೆಹಳ್ಳಿ ಹಾಗೂ ಅವರ ಬೆಂಬಲಿಗರು ರಸ್ತೆಯಲ್ಲೇ ಧರಣಿ ನಡೆಸಿದ್ದು, ಸ್ಥಳದಲ್ಲಿ ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.

ಘಟನೆ ಸಂಬಂಧ ಕೋಮು ಸೌಹಾರ್ದತೆಗೆ ಧಕ್ಕೆ ಹಾಗೂ ಎರಡು ಗುಂಪುಗಳ ನಡುವೆ ದ್ವೇಷ ಉಂಟುಮಾಡಿದ ಆರೋಪದಡಿ ಮೊದಲ ಎಫ್ಐಆರ್ ದಾಖಲಿಸಲಾಗಿದೆ. ಈ ಪ್ರಕರಣದಲ್ಲಿ ಪುನೀತ್ ಕೆರೆಹಳ್ಳಿ, ಗೋಪಿ ಗೌಡ, ವಿನೋದ್ ನಾಯಕ್ ಸೇರಿದಂತೆ ಮತ್ತಿಬ್ಬರ ವಿರುದ್ಧ ಪ್ರಕರಣ ದಾಖಲಾಗಿದ್ದು, ಆರೋಪಿಗಳನ್ನು ಬಂಧಿಸಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಕೊಲೆ ಯತ್ನ ಹಾಗೂ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಕಮಲ್ ಪಾಷಾ, ಅಬೂಬಕರ್ ಸಿದ್ದೀಕ್ ಹಾಗೂ ಸೈಯದ್ ಅನಾಸ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಈ ಮೂವರನ್ನೂ ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಬಂಧಿತರಲ್ಲಿ ಕೆಲವರು ಅಪ್ರಾಪ್ತರು ಎಂಬ ಮಾಹಿತಿ ಪೊಲೀಸರಿಂದ ಲಭ್ಯವಾಗಿದೆ.

ಘಟನೆಯ ಬಳಿಕ ಸಾರ್ವಜನಿಕ ರಸ್ತೆಯಲ್ಲಿ ಧರಣಿ ನಡೆಸಿ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪದಡಿ ಮೂರನೇ ಎಫ್ಐಆರ್ ದಾಖಲಿಸಲಾಗಿದೆ. ಸಾರ್ವಜನಿಕ ರಸ್ತೆ ತಡೆ ಹಾಗೂ ವಾಹನ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪದಡಿ ಘಟನಾ ಸ್ಥಳದಲ್ಲಿದ್ದ ಕೆಲವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಘಟನೆಯ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಸ್ಥಳದಲ್ಲಿ ಕೆಎಸ್‌ಆರ್‌ಪಿ ತುಕಡಿಯನ್ನು ನಿಯೋಜಿಸಲಾಗಿದೆ. ಸ್ಥಳೀಯ ಪೊಲೀಸರು ಕೂಡ ಗಸ್ತು ಹೆಚ್ಚಿಸಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರ ವಹಿಸಿದ್ದಾರೆ.

ಈ ನಡುವೆ ಮೂರು ಪ್ರಕರಣಗಳ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದು, ಗಲಾಟೆಗೆ ನಿಖರ ಕಾರಣ ಹಾಗೂ ಘಟನೆಯಲ್ಲಿ ಭಾಗಿಯಾಗಿದ್ದ ಇತರರ ಬಗ್ಗೆ ಮಾಹಿತಿ ಕಲೆಹಾಕುತ್ತಿದ್ದಾರೆ.

## ಶೈಕ್ಷಣಿಕ ಗುಣಮಟ್ಟ ಹೆಚ್ಚಳಕ್ಕೆ ಸಚಿವರನ್ನೊಳಗೊಂಡ ಸಂಪುಟ ಉಪ ಸಮಿತಿ ರಚನೆ

● ವಿಕ್ರಮ ವಾಹಿನಿ । ಬೆಂಗಳೂರು

ವಿದ್ಯಾರ್ಥಿಗಳ ಸವಾಲುಗಳು ಹಾಗೂ ಶೈಕ್ಷಣಿಕ ಉನ್ನತಿಕರಣಕ್ಕೆ ಸಲಹೆಗಳನ್ನು ನೀಡಲು ರಾಜ್ಯ ಸರ್ಕಾರ, ಸಂಪುಟ ಉಪ ಸಮಿತಿ ರಚಿಸಿದೆ. ಸಚಿವ ಯು.ಟಿ. ಖಾದರ್ ಸಮಿತಿಯ ಮುಖ್ಯಸ್ಥರಾಗಿದ್ದು, ಸಚಿವರಾದ ಬಸವರಾಜ ರಾಯರೆಡ್ಡಿ, ಪ್ರಿಯಾಂಕ್ ಖರ್ಗೆ, ಶರಣ್ ಪ್ರಕಾಶ್ ಪಾಟೀಲ್ ಮತ್ತು ಮಧು ಬಂಗಾರಪ್ಪ ಸದಸ್ಯರಾಗಿದ್ದಾರೆ.



ಪರೀಕ್ಷೆ ಮತ್ತು ನೇಮಕಾತಿ ಪ್ರಕ್ರಿಯೆಗಳಿಗೆ ಒಂದು ನಿಗದಿತ ಹಾಗೂ ಸಮಯಬದ್ಧ ವೇಳಾಪಟ್ಟಿಯನ್ನು ರೂಪಿಸುವ ಬಗ್ಗೆ ಸಮಿತಿಯು ಗಮನಹರಿಸಲಿದೆ. ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮಗಳನ್ನು ತಡೆಗಟ್ಟಿ, ರಾಜ್ಯಮಟ್ಟದ ಪರೀಕ್ಷೆ ಮತ್ತು ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆ, ನ್ಯಾಯಸಮ್ಮತತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಲಾಗುವುದು.

ಆಕಾಂಕ್ಷಿಗಳ ಆರ್ಥಿಕ ಹೊರೆಯನ್ನು ಕಡಿಮೆ ಮಾಡಲು ಖಾಸಗಿ ತರಬೇತಿ ಕೇಂದ್ರಗಳ ಶುಲ್ಕ ನಿಯಂತ್ರಣ ಮತ್ತು ಮೇಲ್ವಿಚಾರಣೆ ಮಾಡುವುದು ಸಮಿತಿಯ ಕಾರ್ಯವ್ಯಾಪ್ತಿಗೆ ಬರಲಿದೆ. ತರಬೇತಿ ಕೇಂದ್ರಗಳು ಮತ್ತು ಹಾಸ್ಟೆಲ್‌ಗಳಲ್ಲಿ ಪರೀಕ್ಷೆಗೆ ಸಂಬಂಧಿಸಿದ ಒತ್ತಡವನ್ನು ನಿಭಾಯಿಸಲು ಆಪ್ತ ಸಮಾಲೋಚನೆ ಹಾಗೂ ವಿದ್ಯಾರ್ಥಿ ಬೆಂಬಲ ವ್ಯವಸ್ಥೆಯನ್ನು ಬಲಪಡಿಸಲಾಗುತ್ತದೆ. ಹಾಗೆಯೇ ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ, ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆಯೂ ಈ ಸಮಿತಿ ಶಿಫಾರಸು ಮಾಡಲಿದೆ. ಸಂಪುಟ ಉಪಸಮಿತಿಯು ಪಾಲುದಾರರೊಂದಿಗೆ ಸಮಾಲೋಚನೆ ನಡೆಸಿ ಒಂದು ತಿಂಗಳೊಳಗೆ ವರದಿಯನ್ನು ಸಲ್ಲಿಸಲು ಸರ್ಕಾರ ಸೂಚಿಸಿದೆ.

## ‘ಪೊಲೀಸ್ ರಾಜ್ಯವಲ್ಲ’: ಅಕ್ರಮ ಬಂಧನಕ್ಕೆ ಹೈಕೋರ್ಟ್ ಕಿಡಿ

● ವಿಕ್ರಮ ವಾಹಿನಿ । ಬೆಂಗಳೂರು


ಸಿವಿಲ್ ವ್ಯಾಜ್ಯದಲ್ಲಿ ಕೇವಲ ಉಯಿಲಿಗೆ ಸಾಕ್ಷಿಯಾಗಿ ಸಹಿ ಮಾಡಿದ್ದ ವ್ಯಕ್ತಿಯನ್ನು ಆರೋಪಿ ಎಂದು ಪರಿಗಣಿಸಿ ಅಕ್ರಮವಾಗಿ ವಶಕ್ಕೆ ಪಡೆದ ವೈಟ್‌ಫೀಲ್ಡ್ ಪೊಲೀಸರ ಕ್ರಮಕ್ಕೆ ಕರ್ನಾಟಕ ಹೈಕೋರ್ಟ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ವರ್ತೂರು ನಿವಾಸಿ ಕೆ.ಎನ್. ಮೋಹನ್ ರೆಡ್ಡಿ ಅವರಿಗೆ ಆಗಸ್ಟ್ 27ರಂದು ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದರೂ, ಎರಡು ದಿನ ಮುನ್ನವೇ ಪೊಲೀಸರು ಅವರನ್ನು ವಶಕ್ಕೆ ಪಡೆದಿದ್ದರು. ಈ ಕ್ರಮ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠ, “ರಾಜ್ಯದಲ್ಲಿ ಕಾನೂನಿನ ಆಡಳಿತವಿದೆ, ಪೊಲೀಸ್ ರಾಜ್ಯವಾಗಲು ಬಿಡುವುದಿಲ್ಲ” ಎಂದು ಕಟುವಾಗಿ ಹೇಳಿತು.

ಅಕ್ರಮ ಬಂಧನಕ್ಕೆ ಕಾರಣರಾದ ತನಿಖಾಧಿಕಾರಿ ಹಾಗೂ ಸಂಬಂಧಪಟ್ಟ ಸಿಬ್ಬಂದಿಯೇ ತಮ್ಮ ಸ್ವಂತ ಹಣದಿಂದ ಅರ್ಜಿದಾರರಿಗೆ 3 ಲಕ್ಷ ಪರಿಹಾರ ನೀಡಬೇಕು ಎಂದು ಕೋರ್ಟ್ ಆದೇಶಿಸಿದೆ. ಅಲ್ಲದೆ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಇಲಾಖಾ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿ, ಅರ್ಜಿದಾರರ ವಿರುದ್ಧದ ಮುಂದಿನ ತನಿಖೆಗೆ ಮಧ್ಯಂತರ ತಡೆ ನೀಡಿದೆ.

## ಎಚ್ಎಸ್ಆರ್ ಲೇಔಟ್‌ನಲ್ಲಿ ನಾಳೆ ವೈಭವದ ಶ್ರೀನಿವಾಸ ಕಲ್ಯಾಣ ಮಹೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು



ನಗರದ ಎಚ್ಎಸ್ಆರ್ ಲೇಔಟ್‌ನ ಅಟಲ್ ಬಿಹಾರಿ ವಾಜಪೇಯಿ ಕ್ರೀಡಾಂಗಣದಲ್ಲಿ ಆ.29ರಂದು ವೈಭವದ ಶ್ರೀನಿವಾಸ ಕಲ್ಯಾಣ ಮಹೋತ್ಸವ ಆಯೋಜಿಸಲಾಗಿದೆ. ಶ್ರೀನಿವಾಸ ಕಲ್ಯಾಣ ಮಹೋತ್ಸವ ಸಮಿತಿ ಹಾಗೂ ಎಚ್ಎಸ್ಆರ್ ಬಡಾವಣೆ ಸಾಂಸ್ಕೃತಿಕ ಅಕಾಡೆಮಿಯ 17ನೇ ವಾರ್ಷಿಕೋತ್ಸವದ ಅಂಗವಾಗಿ, ಮೂರನೇ ಶ್ರಾವಣ ಶನಿವಾರದಂದು ಶ್ರೀ ಶ್ರೀನಿವಾಸ ಉತ್ಸವ ಬಳಗ ಈ ಧಾರ್ಮಿಕ–ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಡಾ. ತಾಯಲೂರು ವಾದಿರಾಜ ಅವರ ನೇತೃತ್ವದಲ್ಲಿ ಭೂದೇವಿ–ಶ್ರೀದೇವಿ ಸಹಿತ ಶ್ರೀನಿವಾಸ ದೇವರ ಕಲ್ಯಾಣೋತ್ಸವ ವೇದಮಂತ್ರಗಳ ಘೋಷದೊಂದಿಗೆ ನೆರವೇರಲಿದೆ. ದಾಸ ಸಾಹಿತ್ಯದ ಕೀರ್ತನೆಗಳು, ಭಜನೆ ಹಾಗೂ ಅರ್ಥಪೂರ್ಣ ವ್ಯಾಖ್ಯಾನದ ಮೂಲಕ ಕಾರ್ಯಕ್ರಮ ಭಕ್ತರಿಗೆ ಆಧ್ಯಾತ್ಮಿಕ ಅನುಭೂತಿ ನೀಡಲಿದೆ.



ಹರಿದಾಸ ಸಾಹಿತ್ಯ ಗಾಯಕ ಪಂಡಿತ್ ಸಂತೋಷ್ ಗದ್ದನಕೇರೆ, ವಿದುಷಿ ಶುಭ ಸಂತೋಷ್ ಹಾಗೂ ಅಪೂರ್ವ ಲಕ್ಷ್ಮಿ ಅವರು ಶ್ರೀನಿವಾಸ ಕಲ್ಯಾಣದ ವಿವಿಧ ಪ್ರಸಂಗಗಳನ್ನು ಗಾಯನದ ಮೂಲಕ ಪ್ರಸ್ತುತಪಡಿಸಲಿದ್ದಾರೆ. ಶ್ರೀ ವಾದಿರಾಜ ಸಂಶೋಧನಾ ಪ್ರತಿಷ್ಠಾನದ ನಿರ್ದೇಶಕ ಡಾ. ಬಿ. ಗೋಪಾಲಾಚಾರ್ ಅವರು ಕಲಿಯುಗದ ದೈವ ಶ್ರೀನಿವಾಸನ ಮಹಿಮೆಯನ್ನು ವ್ಯಾಖ್ಯಾನದ ಮೂಲಕ ಪರಿಚಯಿಸಲಿದ್ದಾರೆ.

ಕಾರ್ಯಕ್ರಮದ ಆರಂಭದಲ್ಲಿ ತಾಳ್ಳಪಾಕ ಅನ್ನಮಾಚಾರ್ಯರ ಕೃತಿಗಳ ಗಾಯನ ನಡೆಯಲಿದ್ದು, ಬಳಿಕ ವಿವಿಧ ಭಜನಾ ಮಂಡಳಿಗಳಿಂದ ಭಜನೆ, ಕೋಲಾಟ ಹಾಗೂ ನೃತ್ಯ ಕಾರ್ಯಕ್ರಮಗಳು ಜರುಗಲಿವೆ. ಧಾರ್ಮಿಕ ಆಚರಣೆಗಳ ಜತೆಗೆ ದಾಸ ಸಾಹಿತ್ಯ, ಸಂಗೀತ ಹಾಗೂ ಸಾಂಸ್ಕೃತಿಕ ಪರಂಪರೆಯ ಪ್ರದರ್ಶನವೂ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಲಿದೆ.



ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ಎ.ಎನ್. ಎಲ್ಲಪ್ಪ ರೆಡ್ಡಿ, ಅಧ್ಯಕ್ಷ ಪ್ರೊ. ಪಿ. ಸದಾಶಿವ ರೆಡ್ಡಿ, ಕಾರ್ಯದರ್ಶಿ ಕೆ. ವಾಸುದೇವ, ಸಲಹೆಗಾರ ಕೆ.ಟಿ. ರಾಮರಾಜು, ವಿ. ಭದ್ರಾ ರೆಡ್ಡಿ ಸೇರಿದಂತೆ ಗಣ್ಯರು ಹಾಗೂ ಭಕ್ತರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ದಾಸ ಸಾಹಿತ್ಯ ಪ್ರಚಾರಕ್ಕೆ ಸಮರ್ಪಿತ ಬಳಗ

‘ಬಾರೋ ಮನೆಗೆ ಗೋವಿಂದ’ ಎಂಬ ಧ್ಯೇಯದೊಂದಿಗೆ 2012ರಲ್ಲಿ ಆರಂಭಗೊಂಡ ಶ್ರೀ ಶ್ರೀನಿವಾಸ ಉತ್ಸವ ಬಳಗವು ಆಧ್ಯಾತ್ಮಿಕ, ಸಾಹಿತ್ಯ, ಸಂಗೀತ ಹಾಗೂ ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆ ಮತ್ತು ಪ್ರಚಾರದಲ್ಲಿ ತೊಡಗಿಸಿಕೊಂಡಿದೆ. ದಾಸ ಸಾಹಿತ್ಯಕ್ಕೆ ಸಂಬಂಧಿಸಿದ ಉಪನ್ಯಾಸ, ದಾಸವಾಣಿ, ಹರಿದಾಸ ಗೋಷ್ಠಿ, ಭಜನೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಬಳಗ ನಿರಂತರವಾಗಿ ಆಯೋಜಿಸುತ್ತಿದೆ.

ತಿರುಮಲೆಯಲ್ಲಿ ಸಾಂಪ್ರದಾಯಿಕವಾಗಿ ನಡೆಯುವ ಶ್ರೀನಿವಾಸ ಕಲ್ಯಾಣೋತ್ಸವ ಹಾಗೂ ಜಲೋತ್ಸವದ ವೈಭವವನ್ನು ದಾಸರ ಪದಗಳು ಮತ್ತು ದೇವರನಾಮಗಳೊಂದಿಗೆ ಸಂಯೋಜಿಸಿ ವಿವಿಧೆಡೆ ಪ್ರಸ್ತುತಪಡಿಸುತ್ತಿರುವುದು ಬಳಗದ ಪ್ರಮುಖ ಸೇವೆಯಾಗಿದೆ.

ಬಳಗದ ಸಾಂಸ್ಕೃತಿಕ ಸೇವೆಯ ಮತ್ತೊಂದು ಹೆಗ್ಗುರುತಾಗಿ, ಶ್ರೀಮದ್ ಉತ್ತರಾದಿ ಮಠಾಧೀಶರಾದ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಅನುಗ್ರಹದಿಂದ ಬೆಂಗಳೂರಿನ ಉತ್ತರಾದಿ ಮಠದ ಶ್ರೀ ದಿಗ್ವಿಜಯ ಲಕ್ಷ್ಮೀನರಸಿಂಹ ದೇವಸ್ಥಾನದ ಆವರಣದಲ್ಲಿ 19 ಅಡಿ ಎತ್ತರದ ಏಕಶಿಲಾ ಪುರಂದರದಾಸರ ಪ್ರತಿಮೆಯನ್ನು 2020ರಲ್ಲಿ ಪ್ರತಿಷ್ಠಾಪಿಸಿ ನಾಡಿಗೆ ಸಮರ್ಪಿಸಲಾಗಿದೆ.

## ‘ವಿಕಸಿತ ಭಾರತ ನಿರ್ಮಾಣದಲ್ಲಿ ಯುವಜನರ ಪಾತ್ರ ಮಹತ್ವದ್ದು’

● ವಿಕ್ರಮ ವಾಹಿನಿ । ಬೆಂಗಳೂರು



ವಿಕಸಿತ ಭಾರತ ನಿರ್ಮಾಣದಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಅವರ ನವೀನ ಆಲೋಚನೆಗಳು ಹಾಗೂ ಸಾಮರ್ಥ್ಯವನ್ನು ರಾಷ್ಟ್ರದ ಪ್ರಗತಿಗೆ ಬಳಸಿಕೊಳ್ಳಬೇಕು ಎಂದು ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

ನಗರದ ಇನ್ಸ್ಟಿಟ್ಯೂಟ್ ಫಾರ್ ಸ್ಟೆಮ್ ಸೆಲ್ ಸೈನ್ಸ್ ಅಂಡ್ ರಿಜನರೇಟಿವ್ ಮೆಡಿಸಿನ್‌ನಲ್ಲಿ ರಾಷ್ಟ್ರೀಯ ಕ್ರೀಡಾ ದಿನ–2026ರ ಅಂಗವಾಗಿ ಆಯೋಜಿಸಿದ್ದ ‘ಖೇಲೋ ಇಂಡಿಯಾ ಸಂವಾದ–ಖೇಲ್ ಕಿ ಬಾತ್, ಪಿಎಂ ಕೆ ಸಾಥ್’ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಯುವ ವ್ಯವಹಾರಗಳ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುವ ‘ಮೇರಾ ಯುವ ಭಾರತ್’ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸುಮಾರು 250 ಯುವಜನರು ಭಾಗವಹಿಸಿದ್ದರು.

ಸಚಿವೆ ಶೋಭಾ ಕರಂದ್ಲಾಜೆ ಅವರು ಯುವಜನರೊಂದಿಗೆ ಸಂವಾದ ನಡೆಸಿ, ದೇಶದ ಅಭಿವೃದ್ಧಿ ಕುರಿತು ಅವರ ದೃಷ್ಟಿಕೋನ, ನವೀನ ಆಲೋಚನೆಗಳು ಹಾಗೂ ಆಕಾಂಕ್ಷೆಗಳನ್ನು ಆಲಿಸಿದರು. ಕ್ರೀಡಾ ವ್ಯವಸ್ಥೆಯ ಸುಧಾರಣೆ, 2036ರ ಒಲಿಂಪಿಕ್ಸ್‌ಗೆ ಪ್ರತಿಭೆಗಳನ್ನು ಸಿದ್ಧಪಡಿಸುವುದು, ಆಡಳಿತದಲ್ಲಿ ಯುವಕರ ಭಾಗವಹಿಸುವಿಕೆ ಹೆಚ್ಚಿಸುವುದು, ವಿಕಸಿತ ಭಾರತಕ್ಕಾಗಿ ಯುವಜನರನ್ನು ಸಬಲೀಕರಣಗೊಳಿಸುವುದು ಹಾಗೂ ‘ನಶಾ ಮುಕ್ತ ಯುವ’ ಅಭಿಯಾನಕ್ಕೆ ಉತ್ತೇಜನ ನೀಡುವುದು ಸೇರಿದಂತೆ ಐದು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಿತು.

ಯುವ ಪ್ರತಿನಿಧಿಗಳು ಕ್ರೀಡಾ ಮೂಲಸೌಕರ್ಯಗಳ ಆಧುನೀಕರಣ, ಬಾಲ್ಯದಲ್ಲೇ ಕ್ರೀಡಾ ಪ್ರತಿಭೆಗಳನ್ನು ಗುರುತಿಸುವ ವ್ಯವಸ್ಥೆ ಬಲಪಡಿಸುವುದು, ಸಾರ್ವಜನಿಕ ಆಡಳಿತದಲ್ಲಿ ಯುವಕರಿಗೆ ಹೆಚ್ಚಿನ ಅವಕಾಶ ಕಲ್ಪಿಸುವುದು, ಭವಿಷ್ಯದ ಉದ್ಯೋಗಗಳಿಗೆ ಅಗತ್ಯ ಕೌಶಲ್ಯಗಳನ್ನು ಬೆಳೆಸುವುದು ಹಾಗೂ ಮಾದಕದ್ರವ್ಯ ಮುಕ್ತ ಸಮುದಾಯಗಳ ನಿರ್ಮಾಣ ಕುರಿತು ಹಲವು ಸಲಹೆಗಳನ್ನು ನೀಡಿದರು.

### ದುಶ್ಚಟಗಳಿಂದ ದೂರವಿರಿ: ಹರ್ಷಿತ್ ರಾಣಾ

ಕಾರ್ಯಕ್ರಮದಲ್ಲಿ ಭಾರತೀಯ ಅಂತಾರಾಷ್ಟ್ರೀಯ ಕ್ರಿಕೆಟಿಗ ಹರ್ಷಿತ್ ರಾಣಾ ಅವರು ತಮ್ಮ ಕ್ರೀಡಾ ಜೀವನದ ಅನುಭವಗಳನ್ನು ಹಂಚಿಕೊಂಡರು. ಅಂತಾರಾಷ್ಟ್ರೀಯ ಮಟ್ಟದಲ್ಲಿ ಯಶಸ್ಸು ಸಾಧಿಸಲು ಶಿಸ್ತು, ದೈಹಿಕ ಸದೃಢತೆ, ನಿರಂತರ ಪರಿಶ್ರಮ ಹಾಗೂ ಮಾನಸಿಕ ಸ್ಥಿರತೆ ಅತ್ಯಗತ್ಯ ಎಂದು ಹೇಳಿದರು.

ಯುವಜನರು ಮಾದಕದ್ರವ್ಯ ಸೇರಿದಂತೆ ಎಲ್ಲ ರೀತಿಯ ದುಶ್ಚಟಗಳಿಂದ ದೂರವಿದ್ದು, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ತಮ್ಮ ಸಮುದಾಯದಲ್ಲಿ ಇತರರಿಗೆ ಮಾದರಿಯಾಗುವ ಮೂಲಕ ‘ನಶಾ ಮುಕ್ತ ಯುವ’ ಅಭಿಯಾನಕ್ಕೆ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ವಿಕಸಿತ ಭಾರತ ನಿರ್ಮಾಣದಲ್ಲಿ ಯುವಶಕ್ತಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಇಂತಹ ಸಂವಾದಗಳು ಸಹಕಾರಿಯಾಗಲಿವೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

## ಲೂಸ್ ಅಡುಗೆ ಎಣ್ಣೆ ಮಾರಾಟಕ್ಕೆ ಬ್ರೇಕ್?

● ವಿಕ್ರಮ ವಾಹಿನಿ । ಬೆಂಗಳೂರು

ಕಲಬೆರಕೆ ಅಡುಗೆ ಎಣ್ಣೆ ಮಾರಾಟಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ರಾಜ್ಯ ಆಹಾರ ಸುರಕ್ಷತಾ ಇಲಾಖೆ ಕಠಿಣ ಕ್ರಮಕ್ಕೆ ಮುಂದಾಗಿದೆ. ಕಲಬೆರಕೆ ಸಾಧ್ಯತೆ ಹೆಚ್ಚಿರುವ ಹಿನ್ನೆಲೆಯಲ್ಲಿ ಲೂಸ್ ಅಡುಗೆ ಎಣ್ಣೆ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ.

ಈ ಸಂಬಂಧ ಅಧಿಕಾರಿಗಳ ಸಮಿತಿ ರಚಿಸಿ, ಲೂಸ್ ಎಣ್ಣೆಯ ಗುಣಮಟ್ಟ, ಮೂಲ ಹಾಗೂ ಮಾರಾಟ ವ್ಯವಸ್ಥೆ ಕುರಿತು ಸಮಗ್ರ ವರದಿ ಪಡೆಯುವಂತೆ ಸಚಿವ ಯು.ಟಿ. ಖಾದರ್ ಸೂಚಿಸಿದ್ದಾರೆ. ಸಮಿತಿ ನೀಡುವ ವರದಿ ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಅಗ್ಗದ ದರದಲ್ಲಿ ಮಾರಾಟವಾಗುವ ಎಣ್ಣೆಯಲ್ಲಿ ಕಲಬೆರಕೆ ನಡೆಯುತ್ತಿರುವ ಬಗ್ಗೆ ದೂರುಗಳ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ತಪಾಸಣೆ ನಡೆಸಲಾಗುತ್ತಿದೆ.

ಇದರೊಂದಿಗೆ ಹೋಟೆಲ್‌ಗಳು ಹಾಗೂ ಕ್ಲಬ್‌ಗಳ ಅಡುಗೆಮನೆಗಳ ಸ್ವಚ್ಛತೆ ಮತ್ತು ಆಹಾರ ಸುರಕ್ಷತಾ ಮಾನದಂಡಗಳ ಮೇಲೂ ನಿಗಾ ಹೆಚ್ಚಿಸಲಾಗಿದೆ. ಸ್ವಚ್ಛತೆ ಕಾಪಾಡಿಕೊಳ್ಳಲು 15 ದಿನಗಳ ಗಡುವು ನೀಡಲಾಗಿದ್ದು, ನಿಯಮ ಪಾಲಿಸದ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಖಾದರ್ ಎಚ್ಚರಿಕೆ ನೀಡಿದ್ದಾರೆ.

## ಕ್ರೀಡಾ ಮೂಲಸೌಕರ್ಯಕ್ಕೆ ರೂ 3,176 ಕೋಟಿ ಹೂಡಿಕೆ; ಯುವಶಕ್ತಿಯೇ ವಿಕಸಿತ ಭಾರತದ ಬಲ

● ವಿಕ್ರಮ ವಾಹಿನಿ ।ೆಂಗಳೂರು



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರವು ದೇಶದ ಕ್ರೀಡಾ ಕ್ಷೇತ್ರವನ್ನು ಬಲಪಡಿಸಲು ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದ್ದು, ಜುಲೈ 2026ರ ವೇಳೆಗೆ ದೇಶಾದ್ಯಂತ 1,067 ಖೇಲೋ ಇಂಡಿಯಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.

2026ರ ರಾಷ್ಟ್ರೀಯ ಕ್ರೀಡಾ ದಿನದ ಅಂಗವಾಗಿ ಬೆಂಗಳೂರಿನ ರಾಮಯ್ಯ ಕಾನೂನು ಕಾಲೇಜಿನಲ್ಲಿ ಆಯೋಜಿಸಿದ್ದ ‘ಖೇಲೋ ಇಂಡಿಯಾ ಸಂವಾದ–ಖೇಲ್ ಕೀ ಬಾತ್, ಪಿಎಂ ಮೋದಿ ಕೇ ಸಾಥ್’ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದಾದ್ಯಂತ 349 ಕ್ರೀಡಾ ಮೂಲಸೌಕರ್ಯ ಯೋಜನೆಗಳಿಗೆ ಸುಮಾರು ರೂ 3,176 ಕೋಟಿ ಹೂಡಿಕೆಯೊಂದಿಗೆ ಅನುಮೋದನೆ ನೀಡಲಾಗಿದೆ. 267 ಕ್ರೀಡಾ ಅಕಾಡೆಮಿಗಳಿಗೆ ಬೆಂಬಲ ನೀಡಲಾಗುತ್ತಿದ್ದು, ಖೇಲೋ ಇಂಡಿಯಾ ಕ್ರೀಡಾಪಟುಗಳಿಗೆ ತರಬೇತಿ ಸೇರಿದಂತೆ ಅಗತ್ಯ ನೆರವು ಒದಗಿಸಲಾಗುತ್ತಿದೆ ಎಂದರು.

ಕ್ರೀಡೆಯಲ್ಲಿ ಯಶಸ್ಸು ಎಂದರೆ ಕೇವಲ ಪದಕ ಗೆಲ್ಲುವುದಲ್ಲ. ಶಿಸ್ತು, ಸಮರ್ಪಣೆ, ಪರಿಶ್ರಮ, ತಂಡದ ಮನೋಭಾವ, ಸೋಲನ್ನು ಎದುರಿಸುವ ಧೈರ್ಯ ಹಾಗೂ ದೇಶಕ್ಕಾಗಿ ಸೇವೆ ಮಾಡುವ ಮನೋಭಾವವನ್ನು ಕ್ರೀಡೆ ಕಲಿಸುತ್ತದೆ. ಯುವಜನರ ಆಸೆ–ಆಕಾಂಕ್ಷೆಗಳನ್ನು ಅರ್ಥಮಾಡಿಕೊಂಡು ಭವಿಷ್ಯದ ಕಾರ್ಯನೀತಿಗಳನ್ನು ರೂಪಿಸುವುದು ‘ಯುವ ಸಂವಾದ’ದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

### ಕ್ರೀಡಾ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ

ಕಳೆದ 12 ವರ್ಷಗಳಲ್ಲಿ ಭಾರತದ ಕ್ರೀಡಾ ಕ್ಷೇತ್ರದಲ್ಲಿ ಮಹತ್ವದ ಪರಿವರ್ತನೆಯಾಗಿದೆ. ಹಿಂದೆ ವಿಶ್ವಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸುವುದೇ ದೊಡ್ಡ ಸಾಧನೆ ಎಂಬ ಪರಿಸ್ಥಿತಿ ಇತ್ತು. ಇದೀಗ ಪ್ರತಿಭೆಗಳನ್ನು ಚಿಕ್ಕ ವಯಸ್ಸಿನಲ್ಲೇ ಗುರುತಿಸಿ, ವೈಜ್ಞಾನಿಕ ತರಬೇತಿ ನೀಡಿ ವಿಶ್ವ ವೇದಿಕೆಗೆ ಕೊಂಡೊಯ್ಯುವ ವ್ಯವಸ್ಥೆ ರೂಪುಗೊಳ್ಳುತ್ತಿದೆ ಎಂದರು.

ಟೋಕಿಯೊ ಮತ್ತು ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತೀಯ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿದ್ದಾರೆ. ಭಾರತೀಯ ಹಾಕಿ ತಂಡ ಸತತ ಒಲಿಂಪಿಕ್ಸ್‌ಗಳಲ್ಲಿ ಪದಕ ಗೆದ್ದು ತನ್ನ ಗತವೈಭವವನ್ನು ಮರಳಿ ಪಡೆದಿದೆ. 2023ರ ಏಷ್ಯನ್ ಗೇಮ್ಸ್‌ನಲ್ಲಿ ಭಾರತ 107 ಪದಕಗಳನ್ನು ಗೆದ್ದು ಹೊಸ ದಾಖಲೆ ನಿರ್ಮಿಸಿದೆ ಎಂದು ಸೋಮಣ್ಣ ತಿಳಿಸಿದರು.

### ‘ಖೇಲೋ ಇಂಡಿಯಾ ಮಿಷನ್’ಗೆ ಆದ್ಯತೆ

2026–27ರ ಕೇಂದ್ರ ಬಜೆಟ್‌ನಲ್ಲಿ ‘ಖೇಲೋ ಇಂಡಿಯಾ ಮಿಷನ್’ ಘೋಷಿಸಲಾಗಿದ್ದು, ದೀರ್ಘಕಾಲೀನ ಹಾಗೂ ಫಲಿತಾಂಶ ಆಧಾರಿತ ಕ್ರೀಡಾ ವ್ಯವಸ್ಥೆ ನಿರ್ಮಿಸುವ ಗುರಿ ಹೊಂದಿದೆ. ‘ಮೇಕ್ ಇನ್ ಇಂಡಿಯಾ’ ಯೋಜನೆಯಡಿ ದೇಶೀಯವಾಗಿ ಕ್ರೀಡಾ ಸಾಮಗ್ರಿಗಳ ಉತ್ಪಾದನೆಗೆ ರೂ 500 ಕೋಟಿ ವಿಶೇಷ ಅನುದಾನ ನೀಡಲಾಗಿದೆ ಎಂದರು.

ಕರ್ನಾಟಕವು ಕ್ರಿಕೆಟ್, ಬ್ಯಾಡ್ಮಿಂಟನ್, ಅಥ್ಲೆಟಿಕ್ಸ್, ಬಿಲಿಯರ್ಡ್ಸ್ ಸೇರಿದಂತೆ ಹಲವು ಕ್ರೀಡೆಗಳಲ್ಲಿ ಪ್ರತಿಭಾವಂತ ಕ್ರೀಡಾಪಟುಗಳನ್ನು ಹೊಂದಿದೆ. ಪ್ರತಿ ಜಿಲ್ಲೆ, ವಿಶ್ವವಿದ್ಯಾಲಯ ಹಾಗೂ ಪ್ರತಿಭಾವಂತ ಯುವಕ–ಯುವತಿಯರಿಗೆ ಕ್ರೀಡಾ ಕ್ಷೇತ್ರದಲ್ಲಿ ಪ್ರಗತಿಗೆ ಸ್ಪಷ್ಟ ಮಾರ್ಗ ಕಲ್ಪಿಸುವುದು ಅಗತ್ಯ. ವಿಶ್ವವಿದ್ಯಾಲಯಗಳು ಶಿಕ್ಷಣದ ಜತೆಗೆ ಕ್ರೀಡೆಯ ಮೂಲಕ ವಿಕಸಿತ ಭಾರತ ನಿರ್ಮಾಣದ ಕೇಂದ್ರಗಳಾಗಬೇಕು ಎಂದು ಕರೆ ನೀಡಿದರು.

### ಯುವಶಕ್ತಿಯೇ ರಾಷ್ಟ್ರಶಕ್ತಿ

‘ಮೇರಾ ಯುವ ಭಾರತ್’ ಉಪಕ್ರಮವು ಯುವಜನರಿಗೆ ಸ್ವಯಂಸೇವೆ, ಅನುಭವಾಧಾರಿತ ಕಲಿಕೆ, ನಾಯಕತ್ವ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ಪಾಲ್ಗೊಳ್ಳಲು ಉತ್ತಮ ವೇದಿಕೆ ಒದಗಿಸುತ್ತಿದೆ. ಯುವಜನರು ಅಭಿವೃದ್ಧಿಯ ಫಲಾನುಭವಿಗಳಷ್ಟೇ ಅಲ್ಲದೆ, ಅದರ ಸಕ್ರಿಯ ಪಾಲುದಾರರಾಗಬೇಕು ಎಂದು ಸೋಮಣ್ಣ ಹೇಳಿದರು.

ಕಾನೂನು ವಿದ್ಯಾರ್ಥಿಗಳಾದ ನೀವು ಹಕ್ಕುಗಳ ಜತೆಗೆ ಕರ್ತವ್ಯಗಳನ್ನೂ ಅರ್ಥಮಾಡಿಕೊಳ್ಳಬೇಕು. ‘ವಿಕಸಿತ ಭಾರತ–2047’ ನಿರ್ಮಾಣಕ್ಕೆ ಪ್ರತಿಯೊಬ್ಬ ಯುವಕ–ಯುವತಿಯೂ ತನ್ನ ಕಾಲೇಜು, ಸಮಾಜ, ಕರ್ನಾಟಕ ಹಾಗೂ ದೇಶಕ್ಕಾಗಿ ಏನು ಕೊಡುಗೆ ನೀಡಬಹುದು ಎಂಬುದನ್ನು ಚಿಂತಿಸಬೇಕು ಎಂದರು.

### ರೈಲ್ವೆಯಲ್ಲಿ 9 ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು

ಭಾರತೀಯ ರೈಲ್ವೆ ಹಲವು ದಶಕಗಳಿಂದ ಕ್ರೀಡಾ ಕ್ಷೇತ್ರಕ್ಕೆ ಪ್ರೋತ್ಸಾಹ ನೀಡುತ್ತಿದೆ. 1928ರಲ್ಲಿ ಸ್ಥಾಪನೆಯಾದ ರೈಲ್ವೆ ಸ್ಪೋರ್ಟ್ಸ್ ಪ್ರಮೋಷನ್ ಬೋರ್ಡ್ ಮೂಲಕ ಕ್ರೀಡೆಯನ್ನು ಉತ್ತೇಜಿಸಲಾಗುತ್ತಿದೆ. ಪ್ರಸ್ತುತ ರೈಲ್ವೆಯಲ್ಲಿ 29 ಕ್ರೀಡಾ ವಿಭಾಗಗಳಲ್ಲಿ 9,000ಕ್ಕೂ ಹೆಚ್ಚು ಕ್ರೀಡಾಪಟುಗಳು ಕಾರ್ಯನಿರ್ವಹಿಸುತ್ತಿದ್ದು, ಅವರಿಗೆ ತರಬೇತಿ, ಅವಕಾಶ ಹಾಗೂ ಉದ್ಯೋಗ ಭದ್ರತೆ ಒದಗಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

### 2036ರ ಒಲಿಂಪಿಕ್ಸ್‌ಗೆ ಬಾಲ ಪ್ರತಿಭೆಗಳ ತಯಾರಿ

2036ರ ಒಲಿಂಪಿಕ್ಸ್‌ನ್ನು ಭಾರತದಲ್ಲಿ ಆಯೋಜಿಸುವ ಮಹತ್ವಾಕಾಂಕ್ಷೆಯ ಹಿನ್ನೆಲೆಯಲ್ಲಿ 5ರಿಂದ 8 ವರ್ಷದೊಳಗಿನ ಮಕ್ಕಳಲ್ಲಿರುವ ಕ್ರೀಡಾ ಪ್ರತಿಭೆಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಬೇಕು. ಅವರಿಗೆ ಆಧುನಿಕ ಸೌಲಭ್ಯ, ಸೂಕ್ತ ಕೋಚಿಂಗ್ ಹಾಗೂ ವೈಜ್ಞಾನಿಕ ತರಬೇತಿ ನೀಡಿ ವಿಶ್ವಮಟ್ಟದ ಕ್ರೀಡಾಪಟುಗಳನ್ನಾಗಿ ರೂಪಿಸುವುದು ಮುಂದಿನ ಹಂತದ ಖೇಲೋ ಇಂಡಿಯಾ ಕಾರ್ಯಕ್ರಮದ ಗುರಿಯಾಗಿದೆ ಎಂದರು.

ಕಾರ್ಯಕ್ರಮದ ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರು ಖೇಲೋ ಇಂಡಿಯಾ ಕಾರ್ಯಕ್ರಮದ ಅಂಗವಾಗಿ ದೇಶದ ಯುವಜನರೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಸಿದ ಸಂವಾದವನ್ನು ಸಚಿವ ಸೋಮಣ್ಣ ಹಾಗೂ ವಿದ್ಯಾರ್ಥಿಗಳು ವೀಕ್ಷಿಸಿದರು.

ಕಾರ್ಯಕ್ರಮದಲ್ಲಿ ಮೈ ಭಾರತ್ ದಕ್ಷಿಣ ವಿಭಾಗದ ನಿರ್ದೇಶಕ ಅಶೋಕ್ ಕುಮಾರ್, ರಾಮಯ್ಯ ಕಾನೂನು ಕಾಲೇಜಿನ ನಿರ್ದೇಶಕ ಆನಂದ್ ರಾಮ್, ಸಿಎಒ ಕರಿಸಿದ್ದಪ್ಪ, ಸಿಇಒ ವಿಶ್ವನಾಥ, ಪ್ರೊ. ಉಮಾ ಮಹೇಶ್, ಧ್ಯಾನ್‌ಚಂದ್ ಪ್ರಶಸ್ತಿ ಪುರಸ್ಕೃತೆ ತೃಪ್ತಿ ಮುರುಗುಂಡೆ, ಪ್ಯಾರಾ ಒಲಿಂಪಿಕ್ಸ್ ಅಥ್ಲೀಟ್ ಹರ್ಷಿತಾ ರಾಜು ಸೇರಿದಂತೆ ಗಣ್ಯರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 149,